ವಿಜಯಪುರ | ಸಂಪುಟ 04 | ಸಂಚಿಕೆ 195 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಸೆಪ್ಟೆಂಬರ್, 26, 2026



"ಸಿದ್ದರಾಮಯ್ಯ ಅವರ ಆರ್ಮಿ ಛಿದ್ರವಾಗಿಲ್ಲ, ಈಗಲೂ ಅವರೇ ನಮಗೆ ಆರ್ಮಿ ಕ್ಯಾಪ್ಟನ್, ನಾನು ವೈಸ್ ಕ್ಯಾಪ್ಟನ್. ಇದರ ಬಗ್ಗೆ ಯಾರಿಗೂ ಅನುಮಾನ ಬೇಡ. ನಾನು ಸಿದ್ದರಾಮಯ್ಯ ಚೆನ್ನಾಗಿಯೇ ಇದ್ದೇವೆ. ನಾವು ಹಿಂದೆಯೂ ಪ್ರತಿ ಬಾರಿ ಭೇಟಿಯಾಗುತ್ತಿರಲಿಲ್ಲ. ಅವಶ್ಯಕತೆ ಇದ್ದಾಗ ಭೇಟಿಯಾಗುತ್ತೇವೆ."

■ ಸತೀಶ್ ಜಾರಕಿಹೊಳಿ
ಸಚಿವರು

# ಸಾರ್ವಜನಿಕ ಆಸ್ಪತ್ರೆಯಲ್ಲಿ ಬಾಣಂತಿ ಸಾವಿಗೆ ತೀವ್ರ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಳಿಕೋಟೆ ತಾಲೂಕಿನ ಸಾಸನೂರ ಗ್ರಾಮದ ಸಂಗಮ್ಮ ಶಿವಾನಂದ ವಡಗೇರಿ ಎಂಬ ಬಾಣಂತಿ ಮಹಿಳೆ ಚಿಕಿತ್ಸೆಗಾಗಿ ಇಂಡಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿದ್ದು, ನಂತರ ವಿಜಯಪುರಕ್ಕೆ ಕರೆದೊಯ್ಯುವ ವೇಳೆ ಅಂಬುಲೆನ್ಸ್‌ನಲ್ಲೇ ಮೃತಪಟ್ಟಿರುವ ಘಟನೆ ಸಾರ್ವಜನಿಕರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಕುಟುಂಬದವರ ಆರೋಪದ ಪ್ರಕಾರ, ಹೆರಿಗೆ ಪ್ರಕ್ರಿಯೆ ನಡೆಸಲು ಆಸ್ಪತ್ರೆಯ ಸಿಬ್ಬಂದಿ ಇಂಜೆಕ್ಷನ್ ನೀಡಿದ ಬಳಿಕ ಮಹಿಳೆ ತೀವ್ರ ನೋವಿನಿಂದ ನರಳಾಡುತ್ತಿದ್ದಳು. ಸೂಕ್ತ ವೈದ್ಯಕೀಯ ಚಿಕಿತ್ಸೆ ಹಾಗೂ ತುರ್ತು ಆರೈಕೆ ಒದಗಿಸುವಲ್ಲಿ ಆಸ್ಪತ್ರೆಯ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ನಿರ್ಲಕ್ಷ್ಯ ತೋರಿದ್ದಾರೆ ಎಂದು ಸಂಬಂಧಿಕರು ದೂರಿದ್ದಾರೆ.

ಮಹಿಳೆಯ ಆರೋಗ್ಯ ಸ್ಥಿತಿ ಗಂಭೀರವಾಗುತ್ತಿದ್ದಂತೆ ವಿಜಯಪುರದ ಆಸ್ಪತ್ರೆಗೆ ರವಾನಿಸುವ ನಿರ್ಧಾರ ಕೈಗೊಳ್ಳಲಾಯಿತು. ಆದರೆ ವಿಜಯಪುರಕ್ಕೆ ಸಾಗಿಸುವ ಮಾರ್ಗ ಮಧ್ಯದಲ್ಲೇ ಅಂಬುಲೆನ್ಸ್‌ನಲ್ಲಿ ಮಹಿಳೆ ಮೃತಪಟ್ಟಿದ್ದಾಳೆ ಎನ್ನಲಾಗಿದೆ. ಮಗು ಕೂಡ ಬದುಕುಳಿಯದೆ ಸಾವನ್ನಪ್ಪಿರುವ ಕುರಿತು ಕುಟುಂಬಸ್ಥರು ಆರೋಪಿಸಿದ್ದಾರೆ.

ಈ ಘಟನೆ ತಿಳಿಯುತ್ತಿದ್ದಂತೆ ಮೃತೆಯ ಸಂಬಂಧಿಕರು ಹಾಗೂ ಗ್ರಾಮಸ್ಥರು ಆಸ್ಪತ್ರೆ ಆಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಸರ್ಕಾರಿ ಆಸ್ಪತ್ರೆಯಲ್ಲಿ ಸಮರ್ಪಕ ವೈದ್ಯರು, ಸಿಬ್ಬಂದಿ ಹಾಗೂ ತುರ್ತು ಚಿಕಿತ್ಸಾ ವ್ಯವಸ್ಥೆ ಇದ್ದಿದ್ದರೆ ಅಮೂಲ್ಯ ಜೀವ ಉಳಿಯಬಹುದಾಗಿತ್ತು ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆಸ್ಪತ್ರೆಯಲ್ಲಿ ನಡೆದ ಚಿಕಿತ್ಸೆ, ಹೆರಿಗೆ ಸಂದರ್ಭದ ವೈದ್ಯಕೀಯ ಕ್ರಮಗಳು ಹಾಗೂ ವಿಜಯಪುರಕ್ಕೆ ರವಾನಿಸುವ ನಿರ್ಧಾರದ ಕುರಿತು ಸಮಗ್ರ ತನಿಖೆ ನಡೆಸಬೇಕು. ಸಂಬಂಧಿಸಿದ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಯ ಪಾತ್ರವನ್ನು ಪರಿಶೀಲಿಸಿ, ನಿರ್ಲಕ್ಷ್ಯ ಸಾಬೀತಾದರೆ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ತಾಯಿ–ಮಗು ಸಾವಿನ ಘಟನೆ ಆಸ್ಪತ್ರೆಯ ವೈದ್ಯಕೀಯ ಸೇವೆಗಳ ಕುರಿತು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದ್ದು, ಆರೋಗ್ಯ ಇಲಾಖೆ ತನಿಖೆಯ ಬಳಿಕವೇ ಘಟನೆಯ ನಿಖರ ಕಾರಣ ಬೆಳಕಿಗೆ ಬರಬೇಕಿದೆ.

## ಕುಟುಂಬಸ್ಥರ ಆರೋಪ

"ಆಸ್ಪತ್ರೆಯಲ್ಲಿ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡಲಿಲ್ಲ. ಮಹಿಳೆ ನೋವಿನಿಂದ ಒದ್ದಾಡುತ್ತಿದ್ದರೂ ಸೂಕ್ತ ಗಮನ ಹರಿಸಲಿಲ್ಲ. ವಿಜಯಪುರಕ್ಕೆ ಕರೆದೊಯ್ಯುವ ವೇಳೆಗೆ ತಡವಾಗಿತ್ತು. ಇದರ ಪರಿಣಾಮವಾಗಿ ತಾಯಿ ಮತ್ತು ಮಗು ಇಬ್ಬರನ್ನೂ ಕಳೆದುಕೊಳ್ಳಬೇಕಾಯಿತು"

■ ಶಿವಾನಂದ ವಡಗೇರಿ
ಮೃತ ಬಾಣಂತಿಯ ಪತಿ




**ಇಂಜೆಕ್ಷನ್ ಬಳಿಕ ಮಹಿಳೆಗೆ ತೀವ್ರ ನೋವು। ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ನಿರ್ಲಕ್ಷ್ಯ ಎಂದು ಸಂಬಂಧಿಕರ ದೂರು**

## ತನಿಖೆಗೆ ಒತ್ತಾಯ

ಘಟನೆಯ ಕುರಿತು ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ಉನ್ನತ ಮಟ್ಟದ ತನಿಖೆ ನಡೆಸಿ, ಸತ್ಯಾಂಶವನ್ನು ಬಹಿರಂಗಪಡಿಸಬೇಕು. ಬಡ ಜನರು ಅವಲಂಬಿಸಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

"ನಮ್ಮಲ್ಲಿ ಸೆ. 22 ರಂದು 11 ಘಂಟೆಗೆ ಮಹಿಳೆ ಬಾಣಂತನಕ್ಕೆ ದಾಖಲಾಗಿದ್ದಾರೆ. ಮಹಿಳಾ ವೈದ್ಯರು ಚೆಕ್ ಮಾಡಿ ಮುಂದಿನ ಚಿಕಿತ್ಸೆಗೆ ಜಿಲ್ಲಾಸ್ಪತ್ರೆಗೆ ರವಾನಿಸಲು ತಿಳಿಸಿದ್ದಾರೆ. ಮಧ್ಯಾಹ್ನ 1 ಗಂಟೆಯ ನಂತರ ಅಂಬುಲೆನ್ಸ ಮುಖಾಂತರ ವಿಜಯಪುರಕ್ಕೆ ಕಳುಹಿಸಲಾಗಿದೆ."

■ ಡಾ. ಆರ್.ಎಸ್.ಇಂಗಳೆ
ಮುಖ್ಯ ವೈದ್ಯಾಧಿಕಾರಿ & ತಾಲೂಕು ವೈದ್ಯಾಧಿಕಾರಿ ಇಂಡಿ

# ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್‌ಗೆ ಜೈಲೇ ಗತಿ!

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗ(ಕೆಪಿ–ಎಸ್ ಸಿ) ನಡೆಸಿದ್ದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಹಗರಣದಲ್ಲಿ ಜೈಲು ಪಾಲಾಗಿರುವ ಅವಮಾನತುಂಗೊಂಡಿರುವ ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ಅವರ ಜಾಮೀನು ಅರ್ಜಿಯನ್ನು ಶುಕ್ರವಾರ ಕೋರ್ಟ್ ವಜಾಗೊಳಿಸಿದೆ.

ಜಾಮೀನು ಕೋರಿ ಬಂಧಿತ ಗ್ಯಾನೇಂದ್ರ ಕುಮಾರ್ ಸಲ್ಲಿಸಿದ್ದ ಅರ್ಜಿಯನ್ನು 52ನೇ ಸಿಸಿಹೆಚ್ ಕೋರ್ಟ್ ಶುಕ್ರವಾರ ವಜಾಗೊಳಿಸಿ ಆದೇಶ ಹೊರಡಿಸಿದೆ.

ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಹಗರಣದಲ್ಲಿ ಐಎಎಸ್ ಅಧಿಕಾರಿ ಗ್ಯಾನೇಂದ್ರ ಕುಮಾರ್ ಹಾಗೂ ಬಿಜೆಪಿ ಮುಖಂಡ, ತುಮಕೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ, ಬಸವರಾಜ್ ಕನ್ನಾಳೆ ಇಬ್ಬರೂ ಜೈಲು ಪಾಲಾಗಿದ್ದಾರೆ.





**ಕೆಪಿಎಸ್ಸಿ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಹಗರಣ। ಗ್ಯಾನೇಂದ್ರ ಕುಮಾರ್ ಜಾಮೀನು ಅರ್ಜಿ ವಜಾ**

## ಪ್ರಕರಣದ ಹಿನ್ನೆಲೆ

ಪಶು ವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆಯ ಫಲಿತಾಂಶ ಹೊರಬಿದ್ದ ತಕ್ಷಣ, ಸುಮಾರು 50ಕ್ಕೂ ಹೆಚ್ಚು ಪರೀಕ್ಷಾರ್ಥಿಗಳು ವಿಧಾನಸೌಧ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಆ ಬೆನ್ನಲ್ಲೇ ಮಧ್ಯವರ್ತಿಗಳು ಪ್ರತಿ ಪಶು ವೈದ್ಯಾಧಿಕಾರಿ ಹುದ್ದೆಗೆ 70 ಲಕ್ಷದಿಂದ 80 ಲಕ್ಷದವರೆಗೆ ಲಂಚ ಕೇಳುತ್ತಿರುವ ಆಡಿಯೋ ಸಂಭಾಷಣೆಗಳು ಬಹಿರಂಗಗೊಂಡಿದ್ದವು. ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ಸರ್ಕಾರವು ಇದರ ತನಿಖೆಯನ್ನು ಸಿಐಡಿ (ಅಖಿಳ)ಗೆ ವಹಿಸಿತ್ತು.

ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ನೇಮಕಾತಿ ಬಯಸುವ ಅಭ್ಯರ್ಥಿಗಳಿಂದ ಭಾರಿ ಮೊತ್ತದ ಹಣಕ್ಕೆ ಬೇಡಿಕೆ, ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಒಎಂಆರ್ ಹಾಳೆಗಳ ತಿರುಚುವಿಕೆ ಕುರಿತಾದ ಆರೋಪಗಳ ಹಿನ್ನೆಲೆಯಲ್ಲಿ ಸಿಐಡಿ ಈ ಹಿಂದೆ ತನಿಖೆಯನ್ನು ಕೈಗೆತ್ತಿಕೊಂಡಿತ್ತು. ಈ ನೇಮಕಾತಿ ಪ್ರಕ್ರಿಯೆಯು 400 ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ಸಂಬಂಧಿಸಿದ್ದಾಗಿದ್ದು, ಪರೀಕ್ಷಾ ಫಲಿತಾಂಶ ಪ್ರಕಟವಾದ ನಂತರ ಈ ಆರೋಪಗಳು ಹೊರಬಂದಿದ್ದವು.

# ಕನಿಷ್ಠ ವೇತನ ಜಾರಿಗೆ ಆಗ್ರಹಿಸಿ ಪತ್ರ ಚಳುವಳಿ



■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ವಸತಿ ನಿಲಯ ಕಾರ್ಮಿಕರು ಕನಿಷ್ಠ ವೇತನ ಜಾರಿಗಾಗಿ ಆಗ್ರಹಿಸಿ ಪತ್ರ ಚಳುವಳಿ ಕೈಗೊಂಡರು.

ಪಟ್ಟಣದ ಅಂಚೆ ಕಚೇರಿಗೆ ಆಗಮಿಸಿದ ವಸತಿ ನಿಲಯ ಕಾರ್ಮಿಕರು ಪತ್ರ ಚಳುವಳಿ ಆರಂಭಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷೆ ಕಾಶೀಬಾಯಿ ಜನಗೊಂಡ ಮಾತನಾಡಿ, ರಾಜ್ಯದ ವಿವಿಧ ಸರ್ಕಾರಿ ವಸತಿ ನಿಲಯಗಳಲ್ಲಿ ವಿವಿಧ ಕಾರ್ಯಗಳನ್ನು ನಿರ್ವಹಿಸುತ್ತಿರುವ ಹೊರಗುತ್ತಿಗೆ ಕಾರ್ಮಿಕರು ಅತ್ಯಂತ ಕಡಿಮೆ ವೇತನದಲ್ಲಿ ದುಡಿಯುತ್ತಿದ್ದಾರೆ. ದುಬಾರಿ ಜೀವನ ನಿರ್ವಹಣೆ ಕಷ್ಟಕರವಾಗಿರುವ ಸಂದರ್ಭದಲ್ಲಿ ಸರ್ಕಾರ ನಿಗದಿ ಪಡಿಸಿರುವ ಪರಿಷ್ಕೃತ ಕನಿಷ್ಠ ವೇತನವನ್ನು ಕಾರ್ಮಿಕರಿಗೆ ಸಮರ್ಪಕವಾಗಿ ನೀಡದೇ ಇರುವುದರಿಂದ ಕಾರ್ಮಿಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವಂತಾಗಿದೆ. ಆದ್ದರಿಂದ ರಾಜ್ಯ ಸಂಯುಕ್ತ ವಸತಿ ನಿಲಯ ಕಾರ್ಮಿಕರ ಸಂಘದಿಂದ ವಸತಿ ನಿಲಯ ಕಾರ್ಮಿಕರಿಗೆ ಶಾಸನಬದ್ಧವಾಗಿ ನಿಗದಿ ಮಾಡಿರುವ ಕನಿಷ್ಠ ವೇತನವನ್ನು ಪ್ರತಿ ತಿಂಗಳು ನಿಗದಿತ ದಿನಾಂಕದೊಳಗೆ ಪಾವತಿಸುವಂತೆ ಕೂಡಲೇ ಜಾರಿ ಮಾಡಬೇಕು ಹಾಗೂ ಶಾಸನಬದ್ಧ ಸೌಲಭ್ಯಗಳನ್ನು ಖಾತ್ರಿ ಪಡಿಸಬೇಕು ಎಂದು ಆಗ್ರಹಿಸಿ ಮುಖ್ಯಮಂತ್ರಿಗಳಿಗೆ ಪತ್ರ ಚಳುವಳಿ ಮೂಲಕ ಒತ್ತಾಯಿಸುತ್ತೇವೆ ಎಂದರು.

ಮುರಾರ್ಜಿ ದೇಸಾಯಿ ವಸತಿ ನಿಲಯಗಳ ತಾಲ್ಲೂಕು ಅಧ್ಯಕ್ಷ ಸಂಜೀವಕುಮಾರ, ರೈತ ಮುಖಂಡ ಅಜೀಜ್ ಯಲಗಾರ, ಸಿದ್ದಯ್ಯ, ಸುಮಿತ್ರಾ ಗೂಳಿ, ಜಯಶ್ರೀ, ಸುಮಿತ್ರಾ, ಬೇಬಿ, ಜ್ಯೋತಿ, ಲಕ್ಷ್ಮಿ ಇದ್ದರು.

# ರೂ. 2,500 ಪರಿಹಾರ ರೈತರಿಗೆ ಅವಮಾನ : ಹೂಗಾರ

■ ಉದಯರಶ್ಮಿ ದಿನಪತ್ರಿಕೆ



**ಎಕರೆಗೆ ರೂ. 50,000 ಪರಿಹಾರ ಹಾಗೂ ಸಂಪೂರ್ಣ ಸಾಲಮನ್ನಾಗೆ ಕಬ್ಬು ಬೆಳೆಗಾರ ಸಂಘದ ಆಗ್ರಹ**

ಕಲಬುರಗಿ: ರಾಜ್ಯದಲ್ಲಿ ತೀವ್ರ ಬರಗಾಲದಿಂದ ರೈತರು ಸಂಕಷ್ಟದಲ್ಲಿದ್ದು, ಸರ್ಕಾರ ಘೋಷಿಸಿರುವ ರೂ. 2,500 ಪರಿಹಾರವು ರೈತರ ಗಾಯದ ಮೇಲೆ ಬರೆ ಎಳೆದಂತಿದೆ ಎಂದು ಆಕ್ರೋಶ ವ್ಯಕ್ತಪಡಿಸಿರುವ ರಾಜ್ಯ ಕಬ್ಬು ಬೆಳೆಗಾರ ಸಂಘದ ಕಲಬುರಗಿ ಜಿಲ್ಲಾ ಘಟಕ, ಸರ್ಕಾರಕ್ಕೆ ಎಚ್ಚರಿಕೆಯ ಸಂದೇಶ ರವಾನಿಸಿದೆ.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಂಘದ ಜಿಲ್ಲಾಧ್ಯಕ್ಷ ರಮೇಶ್ ಎಸ್. ಹೂಗಾರ್, "ಬೀಜ, ರಸಗೊಬ್ಬರ, ಕೂಲಿ ಸೇರಿದಂತೆ ಎಕರೆಗಟ್ಟಲೆ ಖರ್ಚು ಮಾಡಿ ಬೆಳೆದ ಬೆಳೆ ಮಳೆಯಿಲ್ಲದೆ ಒಣಗಿ ಹೋಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ಘೋಷಿಸಿರುವ ಅಲ್ಪ ಮೊತ್ತದ ಪರಿಹಾರ ರೈತರ ಕಷ್ಟಕ್ಕೆ ಕನಿಷ್ಠ ಸಾಂತ್ವನವನ್ನೂ ನೀಡುವುದಿಲ್ಲ. ನಾವು ಸರ್ಕಾರದಿಂದ ಭಿಕ್ಷೆ ಕೇಳುತ್ತಿಲ್ಲ, ಬದಲಾಗಿ ನ್ಯಾಯಯುತವಾದ ಪರಿಹಾರವನ್ನು ಕೇಳುತ್ತಿದ್ದೇವೆ" ಎಂದು ಕಿಡಿಕಾರಿದರು.

**ಸಂಘದ ಪ್ರಮುಖ ಬೇಡಿಕೆಗಳು**

**ಪರಿಹಾರ ಹೆಚ್ಚಳ:** ಪ್ರತಿ ಎಕರೆಗೆ ರೂ. 50,000 ಬರ ಪರಿಹಾರ ನೀಡಬೇಕು. ಕೃಷಿ ವೆಚ್ಚವನ್ನು ಪರಿಗಣಿಸಿ ವೈಜ್ಞಾನಿಕವಾಗಿ ಪರಿಹಾರ ನಿಗದಿಪಡಿಸಬೇಕು.

**ಸಾಲಮನ್ನಾ:** ಬರಗಾಲದ ಸಂಕಷ್ಟದಲ್ಲಿರುವ ರೈತರ ಸಂಪೂರ್ಣ ಕೃಷಿ ಸಾಲವನ್ನು ಸರ್ಕಾರ ಮನ್ನಾ ಮಾಡಬೇಕು.

**ಮೂಲಸೌಕರ್ಯ:** ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆ ಮಾಡಬೇಕು.

**ಸಮೀಕ್ಷೆ:** ಬೆಳೆ ಹಾನಿಯ ಸಮಗ್ರ ಸಮೀಕ್ಷೆ ನಡೆಸಿ ಅರ್ಹ ಪ್ರತಿಯೊಬ್ಬ ರೈತನಿಗೂ ಪರಿಹಾರ ಸಿಗುವಂತೆ ಕ್ರಮ ಕೈಗೊಳ್ಳಬೇಕು.

ಮುಂದಿನ ಹಂಗಾಮಿನ ಕೃಷಿಗೆ ಬೀಜ ಮತ್ತು ರಸಗೊಬ್ಬರದ ಮೇಲೆ ವಿಶೇಷ ರಿಯಾಯಿತಿ ನೀಡಬೇಕು ಎಂದು ಒತ್ತಾಯಿಸಿದ ರಮೇಶ್ ಹೂಗಾರ್, "ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಪರಿಹಾರದ ಮೊತ್ತವನ್ನು ಮರುಪರಿಶೀಲಿಸಬೇಕು. ಇಲ್ಲವಾದಲ್ಲಿ ರಾಜ್ಯ ಕಬ್ಬು ಬೆಳೆಗಾರ ಸಂಘವು ರೈತರನ್ನು ಒಗ್ಗೂಡಿಸಿ ತೀವ್ರ ಸ್ವರೂಪದ ಹೋರಾಟವನ್ನು ಹಮ್ಮಿಕೊಳ್ಳಲಿದೆ" ಎಂದು ಎಚ್ಚರಿಸಿದ್ದಾರೆ.

# ಬಾರದ ಮಳೆಗೆ ಕತ್ತೆಗಳ ಮದುವೆ – ಮೆರವಣಿಗೆ

## ಕಳ್ಳಕವಟಗಿ ಗ್ರಾಮದಲ್ಲಿ ಮಳೆಗಾಗಿ ಗ್ರಾಮಸ್ಥರ ವಿಶೇಷ ಆಚರಣೆ। ಕತ್ತೆಗಳ ಕಾಲು ಮುಟ್ಟಿ

■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ಮಳೆಯ ನಿರೀಕ್ಷೆಯಲ್ಲಿ ಆಕಾಶದತ್ತ ಮುಖ ಮಾಡಿರುವ ರೈತರು, ವರುಣನ ಕೃಪೆಗಾಗಿ ವಿವಿಧ ರೀತಿಯ ಸಾಂಪ್ರದಾಯಿಕ ಆಚರಣೆಗಳಲ್ಲಿ ಒಂದಾದ ಕತ್ತೆಗಳ ಮದುವೆ ನೆರವೇರಿಸಿ, ಗ್ರಾಮದಲ್ಲಿ ಅದ್ದೂರಿ ಮೆರವಣಿಗೆ ನಡೆಸಿ ಕತ್ತೆಗಳಿಗೆ ಗ್ರಾಮಸ್ಥರು ಕಾಲು ಮುಟ್ಟಿ ನಮಸ್ಕರಿಸಿ ಮಳೆಗಾಗಿ ಪ್ರಾರ್ಥಿಸಿದರು.

ತಾಲ್ಲೂಕಿನ ಕಳ್ಳಕವಟಗಿ ಗ್ರಾಮದಲ್ಲಿ ಶುಕ್ರವಾರ ಮಳೆ ಸುರಿಯಲಿ, ಬರದ ಛಾಯೆ ದೂರವಾಗಲಿ, ರೈತರ ಹೊಲಗಳಲ್ಲಿ ಹಸಿರು ಚಿಗುರಲಿ ಎಂಬ ಆಶಯದೊಂದಿಗೆ ಗ್ರಾಮಸ್ಥರು ಈ ಕಾರ್ಯ ನೆರವೇರಿಸಿದರು.

ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿದ್ದು, ರೈತರು ಆತಂಕಕ್ಕೆ ಒಳಗಾಗಿದ್ದಾರೆ. ಬಿತ್ತನೆ ಮಾಡಿದ ಬೆಳೆಗಳಿಗೆ ಸಮರ್ಪಕವಾಗಿ ನೀರು ದೊರೆಯದೆ ಬೆಳೆಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಜಾನುವಾರುಗಳಿಗೂ ನೀರು ಮತ್ತು ಮೇವಿನ ಕೊರತೆ ಎದುರಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗದಲ್ಲಿ ಬರದ ಬಿಸಿ ತೀವ್ರವಾಗಿ ಅನುಭವವಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಕಳ್ಳಕವಟಗಿ ಗ್ರಾಮದ ಶ್ರೀ ಸಂಗಮನಾಥ ದೇವಾಲಯದ ಆವರಣದಲ್ಲಿ ಗ್ರಾಮಸ್ಥರು ಸಾಂಪ್ರದಾಯಿಕವಾಗಿ ಕತ್ತೆಗಳ ಮದುವೆ ಕಾರ್ಯಕ್ರಮ ಆಯೋಜಿಸಿದರು. ಕತ್ತೆಗಳನ್ನು ಅಲಂಕರಿಸಿ, ಮದುವೆ ಸಂಪ್ರದಾಯದಂತೆ ವಿವಿಧ ವಿಧಿವಿಧಾನಗಳನ್ನು ನೆರವೇರಿಸಲಾಯಿತು. ಬಳಿಕ ಗ್ರಾಮಸ್ಥರು ಕತ್ತೆಗಳ ಕಾಲು ಮುಟ್ಟಿ, ಮಳೆ ಸುರಿದು ನಾಡು ಸುಭಿಕ್ಷವಾಗುವಂತೆ ಪ್ರಾರ್ಥಿಸಿದರು. ಬಳಿಕ ಕತ್ತೆಗಳನ್ನು ಗ್ರಾಮದ ಅಗಸಿಯ ಮೂಲಕ ಗ್ರಾಮಕ್ಕೆ ಬರಮಾಡಿಕೊಂಡು, ಪ್ರಮುಖ ಬೀದಿಗಳಲ್ಲಿ ವಾದ್ಯಮೇಳದೊಂದಿಗೆ ಮೆರವಣಿಗೆ ನಡೆಸಲಾಯಿತು. ಮಹಿಳೆಯರು ತಮ್ಮ ಮನೆಗಳ ಮುಂದೆ ಉಡಿಯಕ್ಕಿ ಇಟ್ಟು, ಆರತಿ ಬೆಳಗಿ, ಕತ್ತೆಗಳಿಗೆ ಪೂಜೆ ಸಲ್ಲಿಸಿದರು. ಮಳೆ ಬಂದು ರೈತರ ಹೊಲಗಳು ಹಸಿರಾಗಲಿ, ಗ್ರಾಮದಲ್ಲಿ ನೀರಿನ ಸಮಸ್ಯೆ ದೂರವಾಗಲಿ ಎಂದು ಪ್ರಾರ್ಥಿಸಿದರು.

ಕತ್ತೆಗಳ ಮದುವೆ ಮಾಡಿದರೆ ಮಳೆ ಬರುತ್ತದೆ ಎಂಬ ನಂಬಿಕೆ ಹಿರಿಯರ ಕಾಲದಿಂದಲೂ ಗ್ರಾಮೀಣ ಪ್ರದೇಶಗಳಲ್ಲಿ ನಡೆದುಕೊಂಡು ಬಂದಿದೆ. ಇದೇ ನಂಬಿಕೆಯ ಹಿನ್ನೆಲೆಯಲ್ಲಿ ಗ್ರಾಮಸ್ಥರು ಒಗ್ಗೂಡಿ ಈ ಆಚರಣೆ ನಡೆಸಿದ್ದಾರೆ. ವೈಜ್ಞಾನಿಕವಾಗಿ ಮಳೆಯೊಂದಿಗೆ ಈ ಆಚರಣೆಗೆ ಸಂಬಂಧವಿಲ್ಲದಿದ್ದರೂ, ಮಳೆಯ ನಿರೀಕ್ಷೆಯಲ್ಲಿ ಜನರು ತಮ್ಮ ಸಾಂಪ್ರದಾಯಿಕ ನಂಬಿಕೆಯಂತೆ ಆಚರಣೆ ನಡೆಸುತ್ತಿರುವುದು ಗಮನ ಸೆಳೆಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದವರಿಗೆ ಗ್ರಾಮಸ್ಥರ ವತಿಯಿಂದ ಊಟದ ವ್ಯವಸ್ಥೆಯನ್ನೂ ಮಾಡಲಾಗಿತ್ತು.

"ಕತ್ತೆಗಳ ಮದುವೆ ಮಾಡಿದರೆ ಮಳೆ ಬರುತ್ತದೆ ಎಂಬುದು ನಮ್ಮ ಹಿರಿಯರ ಕಾಲದಿಂದಲೂ ಇರುವ ನಂಬಿಕೆ. ಈ ವರ್ಷ ಮಳೆ ಕೈಕೊಟ್ಟಿರುವುದರಿಂದ ರೈತರು ಹಾಗೂ ಜಾನುವಾರುಗಳು ಸಂಕಷ್ಟದಲ್ಲಿವೆ. ಮಳೆ ಸುರಿದು ರೈತರಿಗೆ ಅನುಕೂಲವಾಗಲಿ, ಬೆಳೆಗಳು ಸಮೃದ್ಧಿಯಾಗಿ ಬೆಳೆಯಲಿ ಎಂಬ ಆಶಯದಿಂದ ಈ ಸಂಪ್ರದಾಯವನ್ನು ಆಚರಿಸಿದ್ದೇವೆ."

■ ಗಿರಮಲ್ಲಯ್ಯ ಮಠಪತಿ
ಗ್ರಾಮಸ್ಥ

"ಮಳೆ ಕೈಕೊಟ್ಟಿರುವುದರಿಂದ ರೈತರಲ್ಲಿ ಆತಂಕ ಹೆಚ್ಚಾಗಿದೆ. ಬಿತ್ತನೆ ಮಾಡಿದ ಬೆಳೆಗಳಿಗೆ ಸಕಾಲಕ್ಕೆ ಮಳೆ ಬಾರದ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾಗುವ ನಿರೀಕ್ಷೆಯನ್ನು ರೈತರು ಹೊಂದಿದ್ದಾರೆ. ಜಾನುವಾರುಗಳಿಗೆ ಕುಡಿಯುವ ನೀರು, ಬೆಳೆಗಳಿಗೆ ನೀರು ಹಾಗೂ ಜನರಿಗೆ ಅಗತ್ಯವಿರುವ ಕುಡಿಯುವ ನೀರು ಸಮರ್ಪಕವಾಗಿ ದೊರೆಯಬೇಕು ಎಂಬುದು ಗ್ರಾಮಸ್ಥರ ಆಶಯವಾಗಿದೆ."

■ ಶಿವಪ್ಪ ಪೂಜಾರಿ
ಗ್ರಾಮಸ್ಥ

# ಕಡಿಮೆ ಪರಿಹಾರ: ಸರ್ಕಾರದ ವಿರುದ್ಧ ರೈತ ಮುಖಂಡರ ಆಕ್ರೋಶ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ರಾಜ್ಯದ ರೈತರನ್ನು ಭಿಕ್ಷಕರಂತೆ ಪರಿಗಣಿಸಿ ಬರಗಾಲ ಪರಿಹಾರವಾಗಿ ಪ್ರತಿಯೊಬ್ಬ ರೈತನ ಒಂದು ಖಾತೆಗೆ 2500 ರೂಗಳಂತೆ ಪರಿಹಾರ ನೀಡಲು ಮುಂತಾದ ರಾಜ್ಯ ಸರ್ಕಾರದ ವಿರುದ್ಧ ಅಖಂಡ ಕರ್ನಾಟಕ ರೈತ ಸಂಘದ ಮುಖಂಡರು ಆಕ್ರೋಶ ಹೊರಹಾಕಿದ್ದಾರೆ.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಂತರ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಬರೆದ ಪತ್ರವನ್ನು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಅವರ ಮುಖಾಂತರ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ, ಅರವಿಂದ ಕುಲಕರ್ಣಿ ಮಾತನಾಡಿ, ಭೀಕರ ಬರಗಾಲ ಆವರಿಸಿ ರೈತರನ್ನು ಕಿತ್ತಿ ತಿನ್ನುತ್ತಿದೆ ವಿವಿಧ ರೈತಪರ ಸಂಘಟನೆಗಳ ಹೋರಾಟದ ಪ್ರತಿಫಲವಾಗಿ ರಾಜ್ಯ ಸರ್ಕಾರ ಬರಗಾಲ ಘೋಷಣೆ ಮಾಡಿದೆ ಆದರೆ ಪರಿಹಾರ ನೀಡಬೇಕೆಂದರೆ ರೈತರನ್ನು ಭಿಕ್ಷುಕರಂತೆ ಪರಿಗಣಿಸಿದೆ. ಪ್ರತಿಯೊಬ್ಬ ರೈತನ ಖಾತೆಗೆ 2500 ರೂಗಳಂತೆ ಪರಿಹಾರ ನೀಡಲು ರಾಜ್ಯ ಸರ್ಕಾರ ಮುಂದಾಗಿದೆ. ಆರ್ಥಿಕವಾಗಿ ಸಂಪೂರ್ಣ ಸರಕಾರದ ಸ್ಥಿತಿ ಹದಗಿಟ್ಟಿದೆ ಎಂಬುದು ಸಾಬೀತಾಗಿದೆ. ಸರ್ಕಾರ ರೈತರಿಗೆ ಕನಿಷ್ಠ ಪ್ರತಿ ಎಕರೆಗೆ 25,000 ರೂ.ಗಳಂತೆ ಪರಿಹಾರ ನೀಡಬೇಕು. ಇಲ್ಲದಿದ್ದರೆ ಸರಕಾರದ ವಿರುದ್ಧ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಅರವಿಂದ ಕುಲಕರ್ಣಿ ಎಚ್ಚರಿಕೆ ನೀಡಿದ್ದಾರೆ.

ಪ್ರತಿಭಟನೆಯಲ್ಲಿ ಸಂಘದ ಜಿಲ್ಲಾ ಸಂಚಾಲಕ ಪಾಂಡು ಹ್ಯಾಟಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗುರುರಾಜ ಪಡಶೆಟ್ಟಿ, ಗುರುಲಿಂಗಪ್ಪ ಪಡಸಲಗಿ, ಶ್ರೀಶೈಲ್ ಕುರಣದ, ಶಿವಪ್ಪ ಮಾಳಗೊಂಡ, ಅಶೋಕ್ ಉಪ್ಪಲದಿನ್ನಿ ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಮೈಸೂರು ದಸರಾ: ಕನ್ನಡ ಪುಸ್ತಕಗಳ ಮಾರಾಟ ಮೇಳಕ್ಕೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಶ್ವಪ್ರಸಿದ್ಧ ಮೈಸೂರು ದಸರಾ ಉತ್ಸವ–2026ರ ಅಂಗವಾಗಿ ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ದಸರಾ ಉತ್ಸವ ಸಮಿತಿಯ ಸಹಯೋಗದಲ್ಲಿ ಅ.11 ರಿಂದ 20ರವರೆಗೆ ಮೈಸೂರು ದಸರಾ ಕನ್ನಡ ಪುಸ್ತಕಗಳ ರಿಯಾಯಿತಿ ಮಾರಾಟ ಮೇಳದಲ್ಲಿ ಭಾಗವಹಿಸಲು ಆಸಕ್ತ ಕನ್ನಡ ಪ್ರಕಾಶಕರು ಹಾಗೂ ಪುಸ್ತಕ ಮಾರಾಟಗಾರ–ರಿಂದ ಅರ್ಜಿ ಆಹ್ವಾನಿಸಲಾಗಿದೆ. ಮೈಸೂರಿನ ಹಳೆಯ ಜಿಲ್ಲಾಧಿಕಾರಿ ಕಚೇರಿ ಎದುರಿನ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಮೈದಾನದಲ್ಲಿ ನಡೆಯಲಿದೆ. ಪುಸ್ತಕ ಮಳಿಗೆಗಳನ್ನು ಆದ್ಯತೆಯ ಮೇರೆಗೆ ಹಂಚಿಕೆ ಮಾಡಲಾಗುತ್ತಿದ್ದು, ಪ್ರತಿ ಮಳಿಗೆಗೆ ರೂ.1,000 ಭದ್ರತಾ ಠೇವಣಿಯನ್ನು ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ಇವರ ಹೆಸರಿನಲ್ಲಿ ಡಿ.ಡಿ. ಮೂಲಕ ಸಲ್ಲಿಸಬೇಕು. ನಿಗದಿತ ಅರ್ಜಿ ನಮೂನೆಯನ್ನು ಬೆಂಗಳೂರಿನ ಜೆ.ಸಿ.ರಸ್ತೆಯ ಕನ್ನಡ ಭವನದಲ್ಲಿರುವ ಕನ್ನಡ ಪುಸ್ತಕ ಪ್ರಾಧಿಕಾರದ ಕಚೇರಿ, ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್ ಇಠಿಠಿ.ಇಚಿಡಿ–ಟಿಚಿಣಚಿಞಚಿ.ರಠತ.ಎಟ ಮೂಲಕ ಉಚಿತವಾಗಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳು ಹಾಗೂ ಡಿ.ಡಿ.ಯೊಂದಿಗೆ ಅ.5ರ ಸಂಜೆ 5 ಗಂಟೆಯೊಳಗೆ ನೋಂದಾಯಿತ ಅಂಚೆ ಅಥವಾ ಕೋರಿಯರ್ ಮೂಲಕ ಕನ್ನಡ ಪುಸ್ತಕ ಪ್ರಾಧಿಕಾರದ ಬೆಂಗಳೂರು ಕಚೇರಿಗೆ ತಲುಪಿಸಸುವಂತೆಯೂ, ಹೆಚ್ಚಿನ ಮಾಹಿತಿಗಾಗಿ ಆಡಳಿತಾಧಿಕಾರಿಗಳು, ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಭವನ,ಜೆ.ಸಿ.ರಸ್ತೆ, ಬೆಂಗಳೂರು–560002 ಅಥವಾ ದೂರವಾಣಿ ಸಂಖ್ಯೆ 080–22484516 ಅನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಪೋಲಕಪಳ್ಳಿ ಗ್ರಾ.ಪಂ.ಗೆ ತಾ.ಪಂ. ಇಒ ಭೇಟಿ,ಪರಿಶೀಲನೆ




ಚಿಂಚೋಳಿ: ತಾಲೂಕು ಪೋಲಕಪಳ್ಳಿ ಗ್ರಾಮ ಪಂಚಾಯತಿಗೆ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಂತೋಷ ಚವ್ಹಾಣ ಅವರು ದಿಢೀರನೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗ್ರಾಮ ಪಂಚಾಯತ ವ್ಯಾಪ್ತಿಯ ಎಲ್ಲಾ ಶಾಲೆಗಳು, ಅಂಗನವಾಡಿಗಳು ಹಾಗೂ ಘನತ್ಯಾಜ ವಿಲೇವಾರಿ ಘಟಕವನ್ನು ವೀಕ್ಷಿಸಿದ ಅವರು, ನಂತರ ವಿವಿಧ ವಾರ್ಡಗಳು ಮತ್ತು ಕಾಲೋನಿಗಳಲ್ಲಿ ರಸ್ತೆ ಹಾಗೂ ಚರಂಡಿಗಳ ಅಗಲೀಕರಣದ ಬಗ್ಗೆ ಪರಿಶೀಲನೆ ನಡೆಸಿ, ಸ್ವಚ್ಛತೆ ಮತ್ತು ನೈರ್ಮಲ್ಯದ ಕು–ರಿತು ಅಗತ್ಯ ಸಲಹೆ–ಸೂಚನೆಗಳನ್ನು ನೀಡಿದರು.

ಅದೇ ರೀತಿ ಆರ್‌ಒ (RO) ಪ್ಲಾಂಟನ್ನು ವೀಕ್ಷಿಸಿ, ನೀರಿನ ಗುಣಮಟ್ಟವನ್ನು ಪರಿಶೀಲಿಸಿದರು. ಗ್ರಾಮದಲ್ಲಿನ ಎಲ್ಲಾ ಚರಂಡಿಗಳು ಮತ್ತು ಕೆನಾಲ್‌ಗಳನ್ನು ವೀಕ್ಷಿಸಿದ ಅವರು, ವಾರ್ಡ್ ನಿವಾಸಿಗಳ ಹಿತದೃಷ್ಟಿಯಿಂದ ತುರ್ತು ಅಗತ್ಯವಿರುವ ಸಮಸ್ಯೆಗಳಿಗೆ ತಕ್ಷಣ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ ಮಾಜಿ ಅಧ್ಯಕ್ಷರಾದ ಶಿವರಾಜ್ ಪಾಟೀಲ, ಗ್ರಾಮದ ಮುಖಂಡರಾದ ಹನುಮಂತ ಕೋಡದೂರು, ಶೇಖಪ್ಪ ನಾಟೀಕರ, ಬಸವರಾಜ್ ಹುಡದಳ್ಳಿ, ಹನುಮಂತ ಮಿಲ್ಕ್, ಸೈಯದ್ ಇಬ್ರಾಹಿಂ, ಹಾಗೂ ಗ್ರಾಮ ಪಂಚಾಯತ ಸಿಬ್ಬಂದಿಗಳಾದ ರಾಜಶೇಖರ್ ಹಿತ್ತಲ ಉಪಸ್ಥಿತರಿದ್ದರು.

# ಸಮಾನತೆ ಪಾಲಿಸುವ ಮೌಲ್ಯವಾಗಬೇಕು: ಪ್ರೊ.ಕೋರಿಶೆಟ್ಟಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ:ಮಹಿಳೆಯರಧ್ವನಿಯನ್ನುನಿರ್ಲಕ್ಷಿಸಿದಾಗ ಅದನ್ನು ಸಮಾಜದ ಗಮನಕ್ಕೆ ತರುವುದು ನಮ್ಮ ಕರ್ತವ್ಯ. ಸಮಾನತೆ ಕೇವಲ ಮಾತಿಗೆ ಸೀಮಿತವಾಗದೆ, ಜೀವನದಲ್ಲಿ ಪಾಲಿಸುವ ಮೌಲ್ಯವಾಗಬೇಕು ಎಂದು ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ವಿಜಯಾ ಬಿ. ಕೋರಿಶೆಟ್ಟಿ ಹೇಳಿದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಅಹಲ್ಯಾಬಾಯಿ ಸ್ನಾತಕೋತ್ತರ ಮಹಿಳಾ ಅಧ್ಯಯನ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ, ಪತ್ರಿಕೋದ್ಯಮ ಮತ್ತು ಸಂವಹನ ವಿಭಾಗ, ಸ್ನಾತಕ ವಿಭಾಗ ಹಾಗೂ ಬೆಂಗಳೂರಿನ ಗುಬ್ಬಿವಾಣಿ ಟ್ರಸ್ಟ್ ಸಹಯೋಗದಲ್ಲಿ ಗುರುವಾರ ಹಮ್ಮಿಕೊಂಡಿದ್ದ 'ಅವಳ ಹೆಜ್ಜೆ ಕಿರುಚಿತ್ರ 2026' ಮಹಿಳಾ ನಿರ್ದೇಶಿತ ಕನ್ನಡ ಕಿರುಚಿತ್ರಗಳ ಮರುಪ್ರದರ್ಶನ ಹಾಗೂ ಸಂವಾದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಿಂಗ ಸಂವೇದನೆ ಹಾಗೂ ಮಹಿಳಾ ಸಬಲೀಕರಣದ ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ. ಮಹಿಳೆಯರನ್ನು ಪುರುಷರೂ ಅರ್ಥಮಾಡಿಕೊಳ್ಳುವ ಅಗತ್ಯವಿದೆ. ಉನ್ನತ ಶಿಕ್ಷಣದ ಮೂಲಕ ಪಡೆದ ಜ್ಞಾನವನ್ನು ಕೇವಲ ತಲೆಯಲ್ಲಿ ಇಟ್ಟುಕೊಳ್ಳದೆ, ಜೀವನದಲ್ಲಿ ಅಳವಡಿಸಿಕೊಂಡು ತಮ್ಮ ನಿಲುವನ್ನು ಗಟ್ಟಿಯಾಗಿ ಪ್ರತಿಪಾದಿಸಬೇಕು. ಸಾಮಾಜಿ–ಕ ಸಮಸ್ಯೆಗಳನ್ನು ಆಧರಿಸಿದ ಕಿರುಚಿತ್ರಗಳ ಮೂಲಕ ಪ್ರಶ್ನೆಗಳನ್ನು ಅರ್ಥಮಾಡಿಕೊಂಡು, ಅವುಗಳಿಗೆ ಉತ್ತರ ಕಂಡುಕೊಳ್ಳಲು ಪ್ರಯತ್ನಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಮಂಡ್ಯದ ಗುಬ್ಬಿವಾಣಿ ಟ್ರಸ್ಟ್ 'ಅವಳ ಹೆಜ್ಜೆ' ಕಾರ್ಯಕ್ರಮದ ನಿರ್ದೇಶಕಿ ಶಾಂತಲಾ ದಾಮ್ಲೆ ಮಾತನಾಡಿ, ಮಹಿಳಾ ಸಬಲೀಕರಣವೆಂದರೆ ಮಾನಸಿಕ, ಆರ್ಥಿಕ, ಸಾಮಾಜಿಕ ಹಾಗೂ ರಾಜ–ಕೀಯವಾಗಿ ಸಬಲರಾಗುವುದಾಗಿದೆ. ಮಹಿಳೆಯರು ತಮ್ಮ ಅನುಭವ ಹಾಗೂ ವಿಚಾರಗಳನ್ನು ತಾವೇ ಹೇಳಿಕೊಳ್ಳಲು ಅವಕಾಶ ಕಲ್ಪಿಸುವುದು ಅಗತ್ಯ ಎಂದರು.

ಮಹಿಳೆಯರು ರಾಜಕೀಯ ಪ್ರಜ್ಞೆ ಬೆಳೆಸಿಕೊಳ್ಳಬೇಕು. ಮಾನಸಿಕ ಧೈರ್ಯದ ಜತೆಗೆ ದೈಹಿಕ ಆರೋಗ್ಯ ಮತ್ತು ಶಕ್ತಿಗೂ ಹೆಚ್ಚಿನ ಆದ್ಯತೆ ನೀಡಬೇಕು. ಮುಂದಿನ ಪೀಳಿಗೆಯ ಹೆಣ್ಣುಮಕ್ಕಳು ಇಂದಿನ ಸಮಸ್ಯೆಗಳನ್ನು ಎದುರಿಸುವಂತೆ ಮಹಿಳೆಯರು ಸಕ್ರಿಯವಾಗಿ ಸಬಲರಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗುಬ್ಬಿವಾಣಿ ಟ್ರಸ್ಟ್ ಔಟ್ರೀಚ್ ಸಂಯೋಜಕಿ ಉಷಾ ಸಂಪತ್ ಕುಮಾರ್, ಸ್ನಾತಕ ವಿಭಾಗದ ವಿಶೇಷಾಧಿಕಾರಿ ಪ್ರೊ. ಡಿ.ಎಂ. ಮದರಿ, ಪತ್ರಿಕೋದ್ಯಮ ಮತ್ತು ಸಂವಹನ ವಿಭಾಗದ ಮುಖ್ಯಸ್ಥ ಪ್ರೊ. ಓಂಕಾರ್ ಕಾಕಡೆ, ವಿವಿಧ ವಿಭಾಗಗಳ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು, ಮುಖ್ಯಸ್ಥರು, ಸಂಶೋಧನಾ ವಿದ್ಯಾರ್ಥಿನಿಯರು, ಸ್ನಾತಕ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿನಿಯರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಮತ್ತಿತರಿದ್ದರು.

ಮಹಿಳಾ ಅಧ್ಯಯನ ವಿಭಾಗದ ಮುಖ್ಯಸ್ಥೆ ಪ್ರೊ. ಲಕ್ಷ್ಮೀದೇವಿ ವೈ. ಸ್ವಾಗತಿಸಿದರು, ಸಹಾಯಕ ಪ್ರಾಧ್ಯಾಪಕಿ ಡಾ. ಭಾಗ್ಯಶ್ರೀ ದೊಡಮನಿ ಹಾಗೂ ಡಾ. ಸರೋಜಾ ಸಂತಿ ಅತಿಥಿಗಳನ್ನು ಪರಿಚಯಿಸಿದರು, ಪ್ರದರ್ಶಕ ಕಲೆಗಳ ವಿಭಾಗದ ವಿದ್ಯಾರ್ಥಿನಿ ಪ್ರಾರ್ಥಿಸಿದರು, ಪತ್ರಿಕೋದ್ಯಮ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಸಂದೀಪ್ ನಿರೂಪಿಸಿ, ವಂದಿಸಿದರು.

# ಪರಿಪೂರ್ಣ ಮಾನವನನ್ನಾಗಿ ರೂಪಿಸುವುದೇ ಶಿಕ್ಷಣದ ಗುರಿಯಾಗಲಿ

■ ಉದಯರಶ್ಮಿ ದಿನಪತ್ರಿಕೆ




## ವಿಜಯಪುರದಲ್ಲಿ ಪ್ರೊ. ಎಂ.ಎಸ್. ಖೊದ್ನಾಪೂರ ಅಭಿಮತ

ವಿಜಯಪುರ: ಶಿಕ್ಷಣವೆಂದರೆ ಕೇವಲ ಓದು ಬರೆಯುವುದನ್ನು ಕಲಿಯುವುದಲ್ಲ. ಅದು ವ್ಯಕ್ತಿಯಲ್ಲಿ ವಿಷಯ ಜ್ಞಾನವನ್ನು ಒಡಮೂಡಿಸುವದರೊಂದಿಗೆ ವರ್ತನೆ, ನಡುವಳಿಕೆ, ಬದುಕುವ ಕಲೆ, ಕೌಶಲ್ಯ, ಮೌಲ್ಯಗಳು, ನಡೆ–ನುಡಿ, ಆಚಾರ–ವಿಚಾರ, ಸಂಸ್ಕೃತಿ–ಸಂಸ್ಕಾರ ಮತ್ತು ಜೀವನ ನಿರ್ವಹಣೆಯ ಮೌಲ್ಯಗಳನ್ನು ಮನದಲ್ಲಿ ಬಿತ್ತಿ ಪರಿಪೂರ್ಣ ಮಾನವನನ್ನಾಗಿ ರೂಪಿಸುವದೇ ನಿಜವಾದ ಶಿಕ್ಷಣದ ಗುರಿಯಾಗಬೇಕು. ಹೀಗಾಗಿ ವಿದ್ಯಾರ್ಥಿಗಳು ಕೇವಲ ಪದವಿ, ಅಂಕ ಮತ್ತು ಯಾವುದೇ ಶಿಕ್ಷಣ ಪಡೆದರೂ ಸಾಲದು. ಗುಣಮಟ್ಟದ ಶಿಕ್ಷಣ ಪಡೆಯುವುದರ ಜೊತೆಗೆ ಜೀವನದಲ್ಲಿ ಯಶಸ್ಸು ಪಡೆಯಲು ಬೇಕಾದ ಜೀವನ ಕೌಶಲ್ಯಗಳನ್ನು ರೂಡಿಸಿಕೊಳ್ಳಬೇಕೆಂದು ಪ್ರೊ. ಎಂ.ಎಸ್.ಖೊದ್ನಾಪೂರ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಅವರು ಮನಗೂಳಿಯ ಡ್ಕಾರಿ ಪ್ರಥ–'ಮ ರ್ದೆ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಶಾ ಕೋಶದಡಿಯಲ್ಲಿ ಜರುಗಿದ "ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ವಾಣಿಜ್ಯಶಾಸ್ತ್ರ" ವಿಷಯ ಕುರಿತ ವಿಶೇಷ ಉಪನ್ಯಾಸದಲ್ಲಿ ಅವರು ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡುತ್ತಿದ್ದರು.

ವಿದ್ಯಾರ್ಥಿಗಳುಬದಲಾಗುತ್ತಿರುವಕಾರ್ಪೊರೇಟ್‌ಜಗತ್ತಿಗೆ ಅಗತ್ಯವಾಗಿರುವ ಕೌಶಲ್ಯಗಳನ್ನು ಒಡಮೂಡಿಸಿಕೊಂಡಾಗ ಮಾತ್ರ ಕಂಪನಿಗಳ ಆಡಳಿತ ನಿರ್ವಹಣೆ, ವ್ಯವಸ್ಥಾಪನೆ ಹಾಗೂ ಮಾರುಕಟ್ಟೆ, ಫೈನಾನ್ಸ್, ವಿಮೆ, ಸಾರಿಗೆ ಮತ್ತು ಉದ್ಯಮಶೀಲತೆ ಅಭಿವೃದ್ಧಿ, ಮಾನವ ಸಂಪನ್ಮೂಲ ನಿರ್ವಹಣೆ, ಬ್ಯಾಂಕಿಂಗ್‌ನಂತಹ ಕ್ಷೇತ್ರಗಳಲ್ಲಿ ಅರ್ಹತೆಯನ್ನು ಪಡೆಯಲು ಸಾಧ್ಯ. ವಿಷಯ ಜ್ಞಾನದ ಜತೆಗೆ ಪ್ರಾಯೋಗಿಕತೆ, ತಾಂತ್ರಿಕ ಜ್ಞಾನ, ಗಣಕವಿಜ್ಞಾನದ ಬಳಕೆ ಮತ್ತು ಬಹು ಮುಖ್ಯವಾಗಿ ಸಂಪರ್ಕ–ಸಂವಹನ ಕಲೆಯಂತಹ ವಿಶೇಷ ಕೌಶಲ್ಯಗಳನ್ನು ಹೊಂದುತ್ತಾ ದೊರೆಯುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಅಧ್ಯಕ್ಷತೆವಹಿಸಿದ್ದಪ್ರಾಂಶುಪಾಲರಾದಪ್ರೊ.ಎಂ.ಆರ್. ಜೋಶಿ ಅವರು ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಸಾಫಲ್ಯ ಪಡೆಯಬೇಕಾದರೆ ಕೌಶಲ್ಯಗಳು ಅಗತ್ಯ. ಅವುಗಳಲ್ಲಿ ಕ್ರಿಯಾತ್ಮಕ ಚಿಂತನೆ, ವಿಭಿನ್ನವಾದ ಆಲೋಚನೆಗಳನ್ನು ಬಳಸಿಕೊಂಡು ತಮ್ಮಲ್ಲಿರುವ ಶಕ್ತಿ–ಸಾಮರ್ಥ, ಕೊರತೆ, ಅವಕಾಶಗಳು ಮತ್ತು ಮುಂದಿನ ಸವಾಲುಗಳ ಬಗ್ಗೆ ವಿಶ್ಲೇಷಣೆ ಮಾಡುತ್ತಾ ಕೊರತೆಗಳನ್ನು ಸಾಧ್ಯತೆಗಳನ್ನಾಗಿ ಪರಿವರ್ತಿಸುವ ವಿಶೇಷ ಗುಣಗಳನ್ನು ಹೊಂದಬೇಕಾಗಿದೆ ಎಂದರು.

ಡಾ. ಎ.ಎ.ಮುಲ್ಲಾ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹೇಶ ಕಲ್ಲೂರ ನಿರೂಪಿಸಿದರು.

ಸಮಾರಂಭದಲ್ಲಿ ಪ್ರೊ. ಐ.ಎಸ್. ಮಠಪತಿ, ಪ್ರೊ. ನೀಲಮ್ಮ ಹತ್ತಳ್ಳಿ, ಡಾ. ಜಹೀದಾ ಮಕಾಂದಾರ, ಪ್ರೊ. ಅನೀಲ ಚವ್ಹಾಣ ಇನ್ನಿತರರು ಸಹ ಉಪಸ್ಥಿತರಿದ್ದರು.

# ಪಂಚ ತತ್ವಗಳ ಪಂಚಾಮೃತ

■ ಉದಯರಶ್ಮಿ ದಿನಪತ್ರಿಕೆ




ವೀಣಾ ಹೇಮಂತ್ ಗೌಡ ಪಾಟೀಲ್.
ಮುಂಡರಗಿ – ಗದಗ



ಪಾಲಕರು ಮತ್ತು ಮಕ್ಕಳ ನಡುವಿನ ಸಂಬಂಧ ಅತ್ಯಂತ ಅವಿನಾಭಾವವಾದದ್ದು. ನೀನು ನಕ್ಕರೆ ಹಾಲು ಸಕ್ಕರೆ ಎಂಬಂತೆ ಮಗುವಿನ ನಗುವಿನಲ್ಲಿ ಹಾಲು ಜೇನನ್ನು ಕಾಣುವ ಜಗತ್ತಿನ ಅತ್ಯದ್ಭುತ ಬಂಧ ಪಾಲಕರು ಮತ್ತು ಮಕ್ಕಳದು. ಪಾಲಕರು ಮತ್ತು ಮಕ್ಕಳ ನಡುವೆ ವಯಸ್ಸಿನ ಅಂತರ ಪೀಳಿಗೆಯ ಅಂತರಗಳು ಈಗಾಗಲೇ ಇದ್ದು ಇದೀಗ ಸಾಮಾಜಿಕ ಜಾಲತಾಣಗಳು ಈ ಅಂತರವನ್ನು ಮತ್ತಷ್ಟು ಹೆಚ್ಚಿಸಿವೆ. ಪಾಲಕರು ಹೇಳುವ ಪ್ರತಿಯೊಂದು ಮಾತುಗಳು ಮಕ್ಕಳಿಗೆ ಬೋಧನೆಯಂತೆ ತೋರಿದರೆ ಮಕ್ಕಳು ತಮ್ಮ ಮಾತನ್ನು ಕೇಳುವುದೇ ಇಲ್ಲ ಎಂಬ ದೂರು ಪಾಲಕರದು. ಹಾವೂ ಸಾಯದ ಕೋಲೂ ಮುರಿಯದ ಪರಿಸ್ಥಿತಿಯನ್ನು ನಾವಿಂದು ಕಾಣುತ್ತಿದ್ದೇವೆ.

ಸಾಮಾನ್ಯವಾಗಿ ನಾವು ದೇವಸ್ಥಾನಗಳಿಗೆ ಹೋದಾಗ ನಮಗೆ ಪ್ರಸಾದದ ರೂಪದಲ್ಲಿ ಪಂಚಾಮೃತ ದೊರೆಯುತ್ತದೆ ಈ ಪಂಚಾಮೃತದಲ್ಲಿ ಹಾಲು ಮೊಸರು ಕಲ್ಲು ಸಕ್ಕರೆ, ಹಣ್ಣುಗಳು ಮತ್ತು ಜೇನುತುಪ್ಪದ ಮಿಶ್ರಣವಿದ್ದು ಇದರಲ್ಲಿ ಯಾವುದು ಯಾರಿಗೆ ದೊರೆಯುತ್ತದೆ ಎಂದು ಹೇಳಲು ಸಾಧ್ಯವಿಲ್ಲ ಆದ್ದರಿಂದಲೇ ನಮ್ಮ ಹಿಂದಿನ ಜನ 'ಪಾಲಿಗೆ ಬಂದದ್ದು ಪಂಚಾಮೃತ' ಎಂದು ಹೇಳುತ್ತಿದ್ದರು. ಆದರೆ ಇಲ್ಲಿ ಇನ್ನೊಂದು ಪಂಚಾಮೃತವಿದೆ.. ಅದುವೇ ನಮ್ಮ ಪಂಚಮಹಾಭೂತಗಳು. ಭೂಮಿ ಆಕಾಶ, ಅಗ್ನಿ, ಜಲ ಮತ್ತು ವಾಯು ಈ ಪಂಚಮಹಾಭೂತಗಳಿಂದ ಆಗಿರುವ ನಮ್ಮ ಭೂಮಿಯಲ್ಲಿ ನಿಗೂಢವಾದ ಶಕ್ತಿಯು ಅಡಗಿದೆ. ನಮ್ಮ ದೇಹವೂ ಕೂಡ ಪಂಚ ಮಹಾಭೂತಗಳಿಂದಲೇ ಆಗಿದೆ. ನಮ್ಮ ದೇಹದಲ್ಲಿರುವ ಗಟ್ಟಿಯಾದ ದೈಹಿಕ ಭಾಗವು ಮೂಳೆಯ ಭಾಗಗಳು ಭೂಮಿಯನ್ನು, ದೇಹದ ದ್ರವ ಪದಾರ್ಥವು ನೀರನ್ನು, ದೇಹದ ಉಸಿರಾಟದ ಕ್ರಿಯೆಯಲ್ಲಿ ವಾಯುವನ್ನು, ನಮ್ಮ ಆಹಾರವನ್ನು ಪಚನ ಮಾಡುವ ಅಗ್ನಿ ಶಕ್ತಿಯನ್ನು ಜಠರದಲ್ಲಿ ಹೊಂದಿರುವ ಮತ್ತು ಅಲ್ಲಲ್ಲಿ ಖಾಲಿಯಾಗಿರುವ ದೇಹದ ಭಾಗದಲ್ಲಿ ಆಕಾಶದ ತತ್ವವನ್ನು ಹೊಂದಿರುವ ಮಾನವ ದೇಹಕ್ಕೆ ಸಾವು ಒದಗಿದಾಗ ಪಾರ್ಥಿವ ಶರೀರವು ಪಂಚಮಹಾಭೂತಗಳಲ್ಲಿ ಲೀನವಾಗುವಂತೆ ಅಂತಿಮ ಕ್ರಿಯೆಗಳು ಜರುಗುತ್ತವೆ.



ವ್ಯಕ್ತಿಯು ಪಂಚ ಮಹಾಭೂತಗಳ ಜೊತೆಗಿನ ಸಂಪರ್ಕದಲ್ಲಿ ಇದ್ದಾಗ ಆತ ಒತ್ತಡರಹಿತನಾಗಿ,ಆ–ತಂಕ ರಹಿತನಾಗಿ, ಸಂತೋಷ ಮತ್ತು ಸಂತೃಪ್ತಿಗಳಿಂದ ತುಂಬಿದವನಾಗಿ ಇರಲು ಸಾಧ್ಯವಾಗುತ್ತದೆ.ವಿಪರೀತ ಕೆಲಸಗಳನ್ನು ಮಾಡಿ ಪೂರೈಸಿದ ವ್ಯಕ್ತಿಯು ಪರಿಸರದ ಮಧ್ಯದಲ್ಲಿ ವಿಶ್ರಾಂತಿಯನ್ನು ಅರಸಿ ಹೋಗಿ ಕುಳಿತಾಗ ಆತ ಸಂಪೂರ್ಣ ಒತ್ತಡಗಳಿಂದ ಮುಕ್ತನಾಗುತ್ತಾನೆ.. ಅಡುಗೆಯ ಮನೆಯೊಳಗೆ ಧಗೆಯಲ್ಲಿ ಅಡುಗೆಯ ಕೆಲಸ ಕಾರ್ಯಗಳನ್ನು ಪೂರೈಸುವ ಗೃಹಿಣಿ ಮನೆಯ ಹಿತ್ತಲದಲ್ಲಿ ಇರುವ ಮರದ ಕೆಳಗೆ ಇಲ್ಲವೇ ಕಟ್ಟೆಯ ಮೇಲೆ ಕುಳಿತು ಸುತ್ತಲಿನ ಹೊಲವನ್ನು ಇಲ್ಲವೇ ಪ್ರಕೃತಿಯನ್ನು ಆಸ್ವಾದಿಸಿದರೆ ಇಲ್ಲವೇ ದಂದಕ್ಕಿಯಲ್ಲಿ ಇರುವ ಪಶು ಪ್ರಾಣಿಗಳ ಜೊತೆ ಮಿಳಿತಗೊಂಡರೆ ಆಕೆಯ ಅರ್ಧ ದಣಿವು ಮಾಯವಾಗುತ್ತದೆ ಅದಕ್ಕೆ ಕಾರಣ ಪ್ರಪಂಚವು ಪಂಚ ಮಹಾಭೂತಗಳಿಂದ ಕೂಡಿದ್ದು ಆಕೆಗೆ ಸಾಂತ್ವನವನ್ನು ನೀಡುವ ಶಕ್ತಿಯನ್ನು ಹೊಂದಿದೆ.

ನಾವು ಮಾತನಾಡುವ ಮತ್ತು ಕಲಿತ ವಿಷಯಗಳಾದ ಕನ್ನಡ,ಇಂಗ್ಲಿಷ್ ಮತ್ತು ಹಿಂದಿ ಭಾಷೆಗಳನ್ನು ಬೇರೆಯವರು ಕೂಡ ಮಾತನಾಡಿದಾಗ ನಾವು ಅವರೊಂದಿಗೆ ಬೇಗನೆ ಸಂಪರ್ಕವನ್ನು ಸಾಧಿಸುತ್ತೇವೆ,

ಆದರೆ ನಮಗೆ ಗೊತ್ತಿಲ್ಲದ ಭಾಷೆಯಲ್ಲಿ ಬೇರೆಯವರು ನಮ್ಮೊಂದಿಗೆ ಮಾತನಾಡಲು ಪ್ರಯತ್ನಿಸಿದಾಗ ನಮಗೆ ಅವರೊಂದಿಗೆ ಸಂವಹನ ಅಸಾಧ್ಯವಾಗುತ್ತದೆ.

ಅಂತೂ ನಮ್ಮ ದೇಹದಲ್ಲಿರುವ ಪಂಚಮಹಾಭೂತ ತತ್ವಗಳು ಪ್ರಕೃತಿಯಲ್ಲಿರುವ ಪಂಚಮಹಾಭೂತ ತತ್ವಗಳೊಂದಿಗೆ ಅನಾಯಾಸವಾಗಿ ಮಿಳಿತಗೊಳ್ಳುತ್ತದೆ ಆದ್ದರಿಂದಲೇ ಪ್ರಕೃತಿಯ ಸಾನಿಧ್ಯದಲ್ಲಿ ಮನುಷ್ಯ ಅತ್ಯಂತ ಸಂತಸದಿಂದ ಇರುತ್ತಾನೆ.

ಈ ಹಿಂದೆ ಮಕ್ಕಳು ಪ್ರಕೃತಿಯ ಸಾನಿಧ್ಯದಲ್ಲಿ ಆಟವಾಡುತ್ತಾ ಇದ್ದಾಗ ಪಾಲಕರು ಮಕ್ಕಳನ್ನು ಮನೆಗೆ ಬಾ ಎಂದು ಕರೆಯಬೇಕಾಗುತ್ತಿತ್ತು, ಆದರೆ ಬದಲಾದ ಸನ್ನಿವೇಶದಲ್ಲಿ ಮಕ್ಕಳು ಹೊರಗೆ ಆಡಲು ಕೂಡ ಪಾಲಕರು ಬಿಡುವುದಿಲ್ಲ,ಅಂತಹ ಪಾಲಕರಿಗೆ ನಾವು ಹೇಳುವುದು ಇಷ್ಟೇ' ಮಕ್ಕಳು ಹೊರಗೆ ಪ್ರಕೃತಿಯಲ್ಲಿ ಆಡುತ್ತಿದ್ದರೆ ಅವರನ್ನು ಒಳಗೆ ಕರೆಯಬೇಡಿ ಎಂದು.

ಹುಟ್ಟಿದ ಮಗು ಮೊದಲ ಐದು ವರ್ಷ ಮಲಗಿ ಬೆಳೆಯುವುದು, ಎರಡನೇ ಐದು ವರ್ಷ ಆಡಿ ಕಳೆಯುತ್ತದೆ. ಮೂರನೇ ಐದು ವರ್ಷ ತಿಂದು ಕಳೆದರೆ ನಾಲ್ಕನೇ ಐದು ವರ್ಷ ತಿರುಗಿ ಕಳೆಯುತ್ತದೆ. ಮಕ್ಕಳ ಬೆಳವಣಿಗೆಗೆ ಮತ್ತು ಈ ಪಂಚ ಮಹಾಭೂತಗಳಿಗೆ ಅತ್ಯಂತ ನೇರವಾದ ಮತ್ತು ನಿಖರವಾದ ಸಂಪರ್ಕವಿದೆ.



ಮಕ್ಕಳು ತಮ್ಮೊಳಗಿನ ಅಗ್ನಿಯನ್ನು ಶಮನಗೊಳಿಸಿಕೊಳ್ಳಲು ಹೊರಗಿನ ಬಿಸಿಲಿನಲ್ಲಿ ಆಟವಾಡಿ ತಮ್ಮ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿಕೊಳ್ಳಲೇಬೇಕು. ತಮ್ಮೊಳಗಿನ ವಾಯು ಶಕ್ತಿಯನ್ನು ಹೆಚ್ಚಿಸಿಕೊಳ್ಳಲು ಪ್ರಕೃತಿಯಲ್ಲಿ ಸಾಯಂಕಾಲದ ಸಮಯದಲ್ಲಿ ಆಡುವ, ಹಾರಾಡುವ, ತೀವ್ರ ಗತಿಯ ಉಸಿರಾಟ ಕ್ರಿಯೆಯನ್ನು ಹೆಚ್ಚಿಸುವ ಆಟಗಳಲ್ಲಿಮಕ್ಕಳು ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು.

ಮಕ್ಕಳ ಮೆದುಳಿನಲ್ಲಿ ಈ ಜಗತ್ತಿನ ಎಲ್ಲಾ ಆಗು ಹೋಗುಗಳ ಅರಿವು ಉಳಿದು ಹೋಗಲು ಅವರು ಪ್ರಕೃತಿಯೊಂದಿಗೆ ಒಡನಾಡಲೇಬೇಕು. ಆದ್ದರಿಂದ ಪಾಲಕರು ತಮ್ಮ ಮಕ್ಕಳ ಆಟೋಟಗಳಿಗೆ ಕಡಿವಾಣ ಹಾಕದೆ ಅವರು ಪ್ರಕೃತಿಯ ಸಾನಿಧ್ಯದಲ್ಲಿ ಹತ್ತು ಹಲವು ಗಿಡ ಮರಗಳ ಕೆಳಗೆ ಆಡುವ, ಕೆರೆ ಹಳ್ಳಗಳಲ್ಲಿ ಸ್ನಾನ ಮಾಡಲು, ಆಟವಾಡಲು ಮಕ್ಕಳಿಗೆ ಅವಕಾಶ ಮಾಡಿಕೊಡಬೇಕು ಮಕ್ಕಳು ನಿಸರ್ಗದ ಮಡಿಲಲ್ಲಿ ಮಗುವಾಗಿ ಹಾಡಿ ಆಡಿ ನಲಿದು ಸಂತೋಷ ಪಡಬೇಕು.





# ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಎನ್ನೆಸ್ಸೆಸ್ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯೂಎಸಿ ವಿಭಾಗ ಹಾಗೂ ವಲಯ ಅರಣ್ಯಾಧಿಕಾರಿಗಳ ಕಚೇರಿ ಸಹಯೋಗದಲ್ಲಿ 2026 27ನೇ ಸಾಲಿನ ಎನ್‌ಎಸ್‌ಎಸ್ ದಿನಾಚರಣೆ ಹಾಗೂ ವನಮಹೋತ್ಸವ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವಲಯ ಅರಣ್ಯಾಧಿಕಾರಿ ವಿರೇಶ ಅಂದೋಲಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ವಿದ್ಯಾರ್ಥಿಗಳು ಪರಿಸರದ ಮಹತ್ವ ಅರಿತು ಗಿಡಗಳನ್ನು ನೆಟ್ಟು ಬೆಳೆಸುವ ಮೂಲಕ ಹಸಿರು ಪರಿಸರ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎಸ್. ಹಳೇಮನಿ, ಎನ್‌ಎಸ್‌ಎಸ್ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು. ಐಕ್ಯೂಎಸಿ ಸಂಚಾಲಕ ಡಾ. ರಾಜಶೇಖರ ಬೆನಕನಹಳ್ಳಿ ಮಾತನಾಡಿದರು. ಎನ್ ಎಸ್‌ಎಸ್ ಸಂಯೋಜಕ ರಾಜೇಸಾಬ ವನಮಹೋತ್ಸವ ಕುರಿತು ಮಾತನಾಡಿದರು.

ಪ್ರಾಧ್ಯಾಪಕರಾದ ಕೃಷ್ಣಾರೆಡ್ಡಿ ಎಂ, ಸ್ವಾಗತ, ಡಾ. ಶರಣಪ್ಪ ತಳವಾರ ಹಾಗೂ ಡಾ. ಶಶಿಕಾಂತ ಹಾವಳಗಿ ಉಪಸ್ಥಿತರಿದ್ದರು.

ಡಾ. ರೇವಣಸಿದ್ದಪ್ಪ ಅಮ್ಮಣ್ಣಿ ಸ್ವಾಗತಿಸಿದರು. ಡಾ. ಸಿರಾಜ್ ಖಾದ್ರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರೊ ಸ್ವಾಗತ ವಂದಿಸಿದರು.

ಕು. ಭಾಗ್ಯಶ್ರೀ ಕಾರ್ಯಕ್ರಮ ನಿರೂಪಿಸಿದರು. ವನಮಹೋತ್ಸವದ ಅಂಗವಾಗಿ ಕಾಲೇಜು ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮವೂ ನಡೆಯಿತು.




# ಎನ್ನೆಸ್ಸೆಸ್‌ನಿಂದ ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ :ಹೆಗ್ಗನದೊಡ್ಡಿ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ ಗುಣ, ರಾಷ್ಟ್ರೀಯ ಮನೋಭಾವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಉದ್ದೇಶದಿಂದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಪ್ರಾರಂಭಿಸಲಾಗಿದೆ. ವಿದ್ಯಾರ್ಥಿಗಳು ಎನ್‌ಎಸ್‌ಎಸ್ ಘಟಕದ ಸ್ವಯಂಸೇವಕರಾಗಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಾಚಾರ್ಯ ಎರ್. ಹೆಗ್ಗನದೊಡ್ಡಿ ಹೇಳಿದರು.

ಸಿಂದಗಿ ಪಟ್ಟಣದ ಎಚ್.ಜಿ. ಪದವಿ ಪೂರ್ವ ಕಾಲೇಜಿನಲ್ಲಿ ಎನ್‌ಎಸ್‌ಎಸ್ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉಪನ್ಯಾಸಕರಾದ ಎಸ್.ಎ.ಪಾಟೀಲ ಹಾಗೂ ಎಂ.ಎನ್.ಅಜ್ಜಪ್ಪ ರಾಷ್ಟ್ರೀಯ ಸೇವಾ ಯೋಜನೆಯ ಕುರಿತು ಮಾತನಾಡಿದರು. ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಡಾ.ಎಸ್.ಎಸ್. ಚವ್ಹಾಣ ಪ್ರತಿಜ್ಞಾವಿಧಿ ಬೋಧಿಸಿದರು. ಉಪನ್ಯಾಸಕರಾದ ಎಫ್.ಎ.ಹಾಲಪ್ಪನವರ, ಎ.ಆರ್. ಸಿಂದಗಿಕರ, ಸತೀಶ ಬಸರಕೋಡ, ಎ.ಬಿ.ಪಾಟೀಲ, ಮುಕ್ತಾಯಕ್ಕ ಕತ್ತಿ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಶ್ರೀಮಂತ ಹಡಪದ 'ಉತ್ತಮ ಶಿಕ್ಷಕ' ಪ್ರಶಸ್ತಿಗೆ ಆಯ್ಕೆ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಕರ್ನಾಟಕ ರಾಜ್ಯ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವಿಜಯಪುರ ಜಿಲ್ಲಾ ಘಟಕದ ವತಿಯಿಂದ ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಇಂಡಿ ತಾಲೂಕಿನ ಅಂಜುಟಗಿ ಗ್ರಾಮದ ಶ್ರೀ ಮುದ್ದೇಶ ಪ್ರಭು ಹಿರಿಯ ಪ್ರಾಥಮಿಕ ಶಾಲೆಯ ಹಿರಿಯ ಶಿಕ್ಷಕ ಶ್ರೀಮಂತ ಗಂಗಪ್ಪ ಹಡಪದ ಅವರಿಗೆ "ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ"ಗೆ ಆಯ್ಕೆ ಮಾಡಲಾಗಿದೆ.ಸೆ. 27ರಂದು ವಿಜಯಪುರ ಕಂದಗಲ್ ಹಣಮಂತರಾಯ ರಂಗಮಂದಿರದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ.




# ಜನಪದ ಸಾಹಿತ್ಯ ಎಲ್ಲ ಸಾಹಿತ್ಯಗಳ ತಾಯಿ ಬೇರು :ಡಾ.ವಾಲಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬಸವಾದಿ ಶರಣರ ಸಮಾಜೋಧಾರ್ಮಿಕ ಕ್ರಾಂತಿಯಾದ ಬಳಿಕ ಜನಪದರು ಕಂಡು ಕೇಳಿದ, ಶರಣರು ಅನುಭವಿಸಿದ ಕಷ್ಟ ಸುಖಗಳನ್ನು, ವಚನಗಳ ರಕ್ಷಣೆಗಾಗಿ ನಡೆಸಿದ ಹೋರಾಟವನ್ನು ಲಾವಣಿ ತ್ರಿಪದಿಗಳಲ್ಲಿ ಕಟ್ಟಿ ಕೊಟ್ಟರು. ಜನಪದರು ಬೀಸುವಾಗ,ತೊಟ್ಟಿಲು ತೂಗುವಾಗ,ಕಸ ಕೀಳುವಾಗ, ರಾಶಿ ಮಾಡುವಾಗ ಹಾಡಿ ಸಂತೋಷಪಟ್ಟರು. ಜನಪದ ಸಾಹಿತ್ಯ ಎಲ್ಲ ಸಾಹಿತ್ಯ ಪ್ರಕಾರಗಳ ತಾಯಿ ಬೇರಾಗಿದೆ.ಜನಪದ ಸಾಹಿತ್ಯದಿಂದಲೂ ಶರಣರ ಜೀವನ ಸಾಧನೆಯನ್ನು ಚಿತ್ರಿಸಲು ಸಾಧ್ಯವಾಗಿದೆಯೆಂದು ಸಾಹಿತಿ ಡಾ.ಸೋಮಶೇಖರ ವಾಲಿಯವರು ಹೇಳಿದರು.

ಅವರು ವಿಜಯಪುರದ ದಿ ಪ್ರೆಸಿಡೆನ್ಸಿಯಲ್ ಶಿಕ್ಷಣ ಮಹಾವಿದ್ಯಾಲಯದದಲ್ಲಿ ನಡೆದ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ "ಜನಪದದಲ್ಲಿ ಶರಣರು" ವಿಷಯ ಕುರಿತು ಮಾತನಾಡಿದರು. ದಿ.ಗಂಗಾಬಾಯಿ ಉಪ್ಪಿನ, ದಿ.ಹಣಮಂತರಾಯ ಬಾದರಬಂಡಿ ಹಾಗೂ ದಿ.ಬಸವರಾಜ ಅನಂತಪುರ ಅವರ ಸ್ಮರಣಾರ್ಥವಾಗಿ ಹಮ್ಮಿಕೊಂಡಿದ್ದ ದತ್ತಿಸ್ಮರಣೆಯ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ.ಶ್ರೀಮತಿ ಎಸ್.ಟಿ.ಬೋಳರಡ್ಡಿ ಅವರು ವಹಿಸಿದ್ದರು.

ದಾಸೋಹಿಗಳಾದ ಸಿದ್ರಾಮಪ್ಪ ಉಪ್ಪಿನ ಮಾತನಾಡಿದರು. ಜಂಬುನಾಥ ಕಂಚ್ಯಾಣಿ ಪ್ರಾಸ್ತಾವಿಕ ಭಾಷಣ ಮಾಡಿದರು. ಪ್ರೊ ಸಾಹೇಬಗೌಡ ಬಸರಕೋಡ ವಂದಿಸಿದರು. ಸೋಮಶೇಖರ ವಚನ ಗಾಯನ ಮಾಡಿದರು. ಈರಣ್ಣ ತೊಂಡಿಕಟ್ಟಿ ಸ್ವಾಗತಿಸಿದರು. ಆರ್.ಎಂ.ದೊಡಮನಿ, ಸೋಮನಗೌಡ ಪಾಟೀಲ, ಬಸಲಿಂಗಪ್ಪ ಸಾರವಾಡ, ಪ್ರೊ ಸಜ್ಜನ ಉಪಸ್ಥಿತರಿದ್ದರು.

# ಕೆರೆ ಭರ್ತಿಯ ಹೋರಾಟಗಾರ ಕುಂಬಾರ ಇನ್ನಿಲ್ಲ!

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ಕೃಷ್ಣಾ ತೀರದ ಖ್ಯಾತ ನೀರಾವರಿ ಹೋರಾಟಗಾರ, ನಿಡಗುಂದಿಯ ಬಸವರಾಜ ಕುಂಬಾರ(64) ಗುರುವಾರ ನಿಧನರಾದರು. ಅವರಿಗೆ ಪತ್ನಿ, ಓರ್ವ ಪುತ್ರ ಹಾಗೂ ಇಬ್ಬರು ಪುತ್ರಿಯರಿದ್ದಾರೆ.

1995-2000ರ ಕಾಲಘಟ್ಟದಲ್ಲಿ ಕೃಷ್ಣಾ ತೀರದ ರೈತರಲ್ಲಿ ನೀರಾವರಿ ಜಾಗೃತಿ ಮೂಡಿಸಲು 'ಕೃಷ್ಣಾ ಕಣಿವೆ ರೈತ ಹಿತರಕ್ಷಣಾ ಸಮಿತಿ' ಸ್ಥಾಪಿಸಿ ರೈತ ಚಳವಳಿಗೆ ಭದ್ರ ಬುನಾದಿ ಹಾಕಿದವರಲ್ಲಿ ಕುಂಬಾರ ಪ್ರಮುಖರು. 2008-13ರ'ಲ್ಲಿ ಶಾಸಕ ಎಂ.ಬಿ. ಪಾಟೀಲ ಅವರೊಂದಿಗೆ ಕೆರೆ ತುಂಬಿಸುವ ಹೋರಾಟದಲ್ಲಿ ಸಂಚಾಲಕರಾಗಿ ಅವಳಿ ಜಿಲ್ಲೆಗಳಲ್ಲಿ ಸಂಘಟನೆ ಮಾಡಿದರು. ಕೃಷ್ಣಾ ಕಾಡಾ ಅಧ್ಯಕ್ಷರಾಗಿಯೂ ಕುಂಬಾರ ಅಲ್ಪಾವಧಿ ಸೇವೆ ಸಲ್ಲಿಸಿದ್ದರು.

# ಎನ್ನೆಸ್ಸೆಸ್ ಶಿಸ್ತು ನಾಯಕತ್ವ ಬೆಳೆಸುವ ವೇದಿಕೆ :ಸಾತಿಹಾಳ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ವಿದ್ಯಾರ್ಥಿಗಳು ಪಠ್ಯಪುಸ್ತಕದ ಜ್ಞಾನಕ್ಕೆ ಮಾತ್ರ ಸೀಮಿತರಾಗದೆ, ಸಮಾಜದೊಂದಿಗೆ ಬೆರೆತು ಅದರ ಸಮಸ್ಯೆಗಳನ್ನು ಅರಿತುಕೊಂಡು ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಮಕ್ಕಳ ಸಾಹಿತಿ ಎಸ್. ಎಸ್.ಸಾತಿಹಾಳ ಹೇಳಿದರು.

ಸಿಂದಗಿ ನಗರದ ಆರ್.ಡಿ.ಪಾಟೀಲ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪಪೂ ಕಾಲೇಜಿನಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ಸೇವಾ ಯೋಜನೆಯ ಸಂಸ್ಥಾಪನಾ ದಿನಾಚರಣೆ ಸಮಾರಂಭವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಎನ್‌ಎಸ್‌ಎಸ್ ಚಟುವಟಿಕೆಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ, ಸಾಮಾಜಿಕ ಜವಾಬ್ದಾರಿ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಪ್ರಮುಖ ವೇದಿಕೆಯಾಗಿವೆ. ಸಮಾಜಕ್ಕೆ ನಮ್ಮಿಂದ ಸಾಧ್ಯವಾದಷ್ಟು ಸೇವೆ ಸಲ್ಲಿಸುವ ಮೂಲಕ ಮತ್ತೊಬ್ಬರ ಬದುಕಿನಲ್ಲಿ ಸಂತೋಷ ಮೂಡಿಸುವುದೇ ನಿಜವಾದ ಸಾರ್ಥಕತೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯೂ 'ನನಗಾಗಿ ಅಲ್ಲ, ನಾವೆಲ್ಲರಿಗಾಗಿ' ಎಂಬ ಎನ್‌ಎಸ್‌ಎಸ್‌ನ ಆಶಯವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ವೇಳೆ ಪ್ರಾಚಾರ್ಯ ಬಿ.ಎಂ.ಸಿಂಗನಳ್ಳಿ ಮಾತನಾಡಿ, ಸ್ವಯಂಸೇವಾ ಮನೋಭಾವದಿಂದ ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸುವುದು ಅತ್ಯಂತ ಶ್ರೇಷ್ಠವಾದ ಸೇವೆಯಾಗಿದೆ ಎಂದರು.

ರಾಷ್ಟ್ರೀಯ ಸೇವಾ ಯೋಜನಾ ಘಟಕದ ಅಧಿಕಾರಿ ಪ್ರಸನ್ ಜೋಗೂರ ಮಾತನಾಡಿದರು.

ಗಣರಾಜ್ಯೋತ್ಸವ ಪಥಸಂಚಲನದ ಆಯ್ಕೆ ಶಿಬಿರದಲ್ಲಿ ಭಾಗವಹಿಸಿದ ವಿದ್ಯಾರ್ಥಿ ಭಾಗೇಶ ನಾವಿ ಅವರಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಪಿ.ವ್ಹಿ. ಮಹಲಿನಮಠ, ಬಿ.ಬಿ.ಜಮಾದಾರ, ಎನ್.ಬಿ.ಪೂಜಾರಿ, ಶಿವಶರಣ ಬೂದಿಹಾಳ, ಡಾ.ಶರಣಬಸವ ಜೋಗೂರ, ಎಸ್.ಜಿ.ಪಾಟೀಲ, ಎಸ್.ಎಚ್.ಜಾಧವ್, ರಾಹುಲ ನಾರಾಯಣಕರ್, ಸುಭಾಸ ಹೊಸಮನಿ ಎನ್. ಎಂ.ಶೆಳ್ಳಗಿ, ಚಂದು ಬಬಲೇಶ್ವರ್, ಗವಿಸಿದ್ದಪ್ಪ ಆನೆಗುಂದಿ, ಎಸ್.ಜಿ.ಮಾರ್ಸನಳ್ಳಿ, ವ್ಹಿ.ಕೆ.ಹಿರೇಮಠ, ಶಿವಯೋಗಿ ತಾಳಿಕೋಟಿ, ಆರ್.ಎಂ.ಕೊಳ್ಳೂರೆ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

## ಸಿಇಓ ಖುದ್ದು ಸ್ಥಳಕ್ಕೆ ಧಾವಿಸದಿದ್ದರೆ ಡಿಎಸ್ ಬೃಹತ್ ಹೋರಾಟದ ಎಚ್ಚರಿಕೆ!

# ಕರವಿನಾಳದಲ್ಲಿ ದಲಿತ ಸಮುದಾಯಕ್ಕೆ ಮೂಲಸೌಕರ್ಯ ವಂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ / ಸಿಂದಗಿ: ತಾಲೂಕಿನ ಕರವಿನಾಳ ಗ್ರಾಮದ ಶೋಷಿತ ನಿವಾಸಿಗಳ ಮೇಲಿನ ತಾರತಮ್ಯ, ಅಸ್ಪೃಶ್ಯತೆ ಹಾಗೂ ಮೂಲಸೌಕರ್ಯ ವಂಚನೆಯನ್ನು ದಲಿತ ಸಂಘರ್ಷ ಸಮಿತಿ, ದಲಿತ ಸ್ವರಾಜ್ಯ ಸೇನೆ -ಕರ್ನಾಟಕ ಹಾಗೂ ಭೀಮ್ ರಾಜ್ಯ ದಲಿತ ಸೇವಾ ಸಮಿತಿ ತೀವ್ರವಾಗಿ ಖಂಡಿಸಿವೆ.

ಸ್ವತಂತ್ರ ಭಾರತದಲ್ಲೂ ಸಾರ್ವಜನಿಕ ಬೋರ್‌ವೆಲ್ ನೀರು ಬಳಸಲು ಬಿಡದೆ ಜನರಿಗೆ ಕಿರುಕುಳ ನೀಡಲಾಗುತ್ತಿದೆ. ಪಂಚಾಯಿತಿಗೆ ನೂರಾರು ದೂರು ನೀಡಿದರೂ ಸ್ಥಳೀಯ ಆಡಳಿತ ಜಾತೀಯ ಮನಸ್ಥಿತಿಯಿಂದ ಮೌನ ವಹಿಸಿದೆ.

ಈ ತಾರತಮ್ಯ ಶಾಲಾ-ಅಂಗನವಾಡಿಗಳಿಗೂ ಹಬ್ಬಿದ್ದು, ಮಧ್ಯಾಹ್ನದ ಬಿಸಿಊಟ ವಿತರಣೆಯಲ್ಲಿ ಶೋಷಿತ ಸಮುದಾಯದ ಮಕ್ಕಳನ್ನು ಪ್ರತ್ಯೇಕಿಸಿ ಕೊನೆಯಲ್ಲಿ ಊಟ ಬಡಿಸುವ ಮೂಲಕ ಮಾನಸಿಕ ಕಿರುಕುಳ ನೀಡಲಾಗುತ್ತಿದೆ. ಓಣಿಯಲ್ಲಿ ಚರಂಡಿಯಿಲ್ಲದೆ ಸಾಂಕ್ರಾಮಿಕ ರೋಗಗಳ ಭೀತಿ ಆವರಿಸಿದೆ. ಜನಪ್ರತಿನಿಧಿಗಳು ಬಂದಾಗ ನಿವಾಸಿಗಳು ಅಳಲು ತೋಡಿಕೊಳ್ಳದಂತೆ ಸ್ಥಳೀಯ ಮುಖಂಡರು ತಡೆಯುತ್ತಿದ್ದು, ಸರ್ಕಾರಿ ಯೋಜನೆಗಳ ಮಾಹಿತಿಯನ್ನೇ ಮುಚ್ಚಿಟ್ಟು ಸಂಪೂರ್ಣವಾಗಿ ವಂಚಿಸಲಾಗುತ್ತಿದೆ.

ಆದ್ದರಿಂದ ಜಿಪಂ ಸಿಇಓ ಅವರು ತಕ್ಷಣವೇ ಖುದ್ದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು.

ಈ ನ್ಯಾಯಯುತ ಬೇಡಿಕೆಗಳು ಈಡೇರದಿದ್ದರೆ ಜಿಲ್ಲಾ ಪಂಚಾಯತಿಗೆ ಮುತ್ತಿಗೆ ಹಾಕಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಹಾಗೂ ಉಂಟಾಗುವ ಅನಾಹುತಗಳಿಗೆ ಆಡಳಿತವೇ ಹೊಣೆ ಎಂದು ಮುಖಂಡರಾದ ಗೌಡಪ್ಪ ಬಡಿಗೇರ, ಅಮೃತ್ ಮಾವಿನಹಳ್ಳಿ, ಪ್ರಭು ಸಿಂಧೆ, ತಿಪ್ಪಣ್ಣ ಡಿ, ಸುಭಾಶ್ಚಂದ್ರ ಹೊನ್ನಕಂಠಿ, ಆರೂಢಸ್ವಾಮಿ ಕಬಾಡೆ, ಅಪ್ಪು ರಾಜ್ ಹಾಗೂ ಸುರೇಶ್ ಆಲಾಳ ಹಾಗೂ ಇತರ ಮುಖಂಡರು ಎಚ್ಚರಿಸಿದ್ದಾರೆ.

## ಇಂಡಿಯಲ್ಲಿ ವಿಜಯಪುರ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮಹೇಶ್ ಪೋದ್ದಾರ ಅಭಿಮತ

# ವಿದ್ಯಾರ್ಥಿವೇತನ ಉನ್ನತ ಶಿಕ್ಷಣ ಮುಂದುವರಿಸಲು ಸಹಕಾರಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ವಿದ್ಯಾರ್ಥಿಗಳು ಸರ್ಕಾರದಿಂದ ಲಭ್ಯವಿರುವ ವಿವಿಧ ವಿದ್ಯಾರ್ಥಿವೇತನಗಳ ಸೌಲಭ್ಯವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸುವ ವಿಧಾನ, ಅರ್ಹತೆ ಹಾಗೂ ಅಗತ್ಯ ದಾಖಲೆಗಳ ಕುರಿತು ಸರಿಯಾದ ಮಾಹಿತಿ ಹೊಂದಿರಬೇಕು. ಜೊತೆಗೆ ನಾಗರಿಕ ಸೇವಾ ಪರೀಕ್ಷೆಯಂತಹ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಇಂದಿನಿಂದಲೇ ಕ್ರಮಬದ್ಧವಾಗಿ ಸಿದ್ಧತೆ ನಡೆಸಬೇಕು ಎಂದು ವಿಜಯಪುರ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಮಹೇಶ್ ಪೋದ್ದಾರ ಹೇಳಿದರು.

ಅವರು ಗುರುವಾರ ನಗರದ ಜಿ.ಆರ್. ಗಾಂಧಿ ಕಲಾ, ವೈ.ಎ. ಪಾಟೀಲ ವಾಣಿಜ್ಯ ಹಾಗೂ ಎಂ.ಪಿ. ದೋಶಿ ವಿಜ್ಞಾನ ಪದವಿ ಮಹಾವಿದ್ಯಾಲಯದಲ್ಲಿ ಐಕ್ಯೂಎಸಿ, ಎಸ್ಸಿ ಮತ್ತು ಎಸ್ಟಿ ಕಲ್ಯಾಣ ಘಟಕ ಹಾಗೂ ವಿದ್ಯಾರ್ಥಿವೇತನ ಘಟಕದ ವತಿಯಿಂದ ವಿಜಯಪುರದ ಮಾನವ ವಿಕಾಸ ಕೇಂದ್ರದ ಸಹಯೋಗದಲ್ಲಿ ಆಯೋಜಿಸಿದ್ದ ವಿದ್ಯಾರ್ಥಿವೇತನಕ್ಕೆ ಹೇಗೆ ಅರ್ಜಿ ಸಲ್ಲಿಸಬೇಕು ಎಂಬ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ವಿದ್ಯಾರ್ಥಿವೇತನದ ಸೌಲಭ್ಯವು ಆರ್ಥಿಕವಾಗಿ ನೆರವಾಗುವುದರ ಜೊತೆಗೆ, ಉನ್ನತ ಶಿಕ್ಷಣ ಮುಂದುವರಿಸಲು ವಿದ್ಯಾರ್ಥಿಗಳಿಗೆ ಸಹಕಾರಿಯಾಗುತ್ತದೆ ಎಂದ ಅವರು ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಗುರಿಯಾಗಿಸಿಕೊಂಡು ಆರಂಭದಿಂದಲೇ ಯೋಜಿತ ರೀತಿಯಲ್ಲಿ ಅಧ್ಯಯನ ಮಾಡಬೇಕು. ದಿನನಿತ್ಯದ ಓದು, ಸಾಮಾನ್ಯ ಜ್ಞಾನ, ಪ್ರಚಲಿತ ವಿದ್ಯಮಾನಗಳು, ಪತ್ರಿಕೆ ಓದುವ ಅಭ್ಯಾಸ, ನಿರಂತರ ಅಧ್ಯಯನ ಹಾಗೂ ಸಮಯ ನಿರ್ವಹಣೆ ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆಯಲ್ಲಿ ಪ್ರಮುಖವಾಗಿವೆ ಎಂದು ವಿವರಿಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಎಸ್. ಜಿ. ಸಣ್ಣಕ್ಕಿ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ವೃತ್ತಿ ಬೆಳವಣಿಗೆಗೆ ಇಂತಹ ಜಾಗೃತಿ ಕಾರ್ಯಕ್ರಮಗಳು ಸಹಾಯಕವಾಗಿವೆ ಎಂದರು. ಕಾರ್ಯಕ್ರಮದಲ್ಲಿ ಮಾನವ ವಿಕಾಸ ಕೇಂದ್ರ, ವಿಜಯಪುರದ ಕಾರ್ಯದರ್ಶಿ ಜ್ಞಾನೇಶ್ವರ ಎಸ್. ಧೂಳಖೇಡ, ಜಯಪ್ರಸಾದ್ ಡಿ., ವಿ.ಎ. ಕೋರವಾರ ಉಪಸ್ಥಿತರಿದ್ದರು.

# ಫಲಾನುಭವಿ ಆಧಾರಿತ ವಿವಿಧ ಯೋಜನೆಯಡಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ 14 ಫಲಾನುಭವಿ ಆಧಾರಿತ ಯೋಜನೆಗಳನ್ನು 2026-27ನೇ ಸಾಲಿನಲ್ಲಿ ಸೇವಾಸಿಂಧು, ಗ್ರಾಮಒನ್, ಕರ್ನಾಟಕ ಒನ್, ಬೆಂಗಳೂರು ಒನ್, ಸಿಟಿಜೆನ್ಸ್ ಪೋರ್ಟಲ್ ಆನ್‌ಲೈನ್ ತಂತ್ರಾಂಶದಡಿ ಅಳವಡಿಸಲಾಗಿದ್ದು, ಈ ಯೋಜನೆಯಡಿ ಸೌಲಭ್ಯ ಪಡೆಯಲು https://seva-one.karnataka.gov.in ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಇಲಾಖೆಯ 14 ಫಲಾನುಭವಿ ಆಧಾರಿತ ಆನ್‌ಲೈನ್ ವೇದಿಕೆಯಲ್ಲಿ ಅಳವಡಿಸಲಾಗಿರುವ ಪ್ರೋತ್ಸಾಹಧನ ಯೋಜನೆ, ಶಿಶುಪಾಲನಾ ಭತ್ಯೆ, ನಿರುದ್ಯೋಗ ಭತ್ಯೆ,ಆಧಾರ ಯೋಜನೆ, ಮರಣ ಪರಿಹಾರ ನಿಧಿ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಸಾಧನ ಸಲಕರಣೆಗಳ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಪ್ರತಿಭೆ ಯೋಜನೆ, ದೃಷ್ಟಿದೋಷ ಹೊಂದಿರುವ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ,ಟಾಕಿಂಗ್ ಲ್ಯಾಪ್ಟಾಪ್ ಯೋಜನೆ, ಸೇರಿದಂತೆ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ದಿನಾಂಕ: 31-10-2026 ಕೊನೆಯ ದಿನಾಂಕವಾಗಿದೆ.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳಾದ ವಿಜಯಪುರ ಜಿಲ್ಲಾ ಸಂಯೋಜಕರಾದ ಪ್ರತಿಭಾ ಮೊ:9606151149, ವಿಜಯಪುರ ತಾಲೂಕಿನ ರವಿ ರಾಠೋಡ ಮೊ: 9035553337, ಸಿಂದಗಿ ತಾಲೂಕಿನ ಮುತ್ತುರಾಜ ಸಾತಿಹಾಳ ಮೊ: 9980019635, ಬಸವನಬಾಗೇವಾಡಿ ತಾಲೂಕಿನ ಶಿವಲೀಲಾ ಬಿರಾದಾರ ಮೊ: 8722135660, ಇಂಡಿ ತಾಲೂಕಿನ ಪರಶುರಾಮ ಬೋಸಲೆ ಮೊ: 9972441464 ಹಾಗೂ ಮುದ್ದೇಬಿಹಾಳ ತಾಲೂಕಿನ ಎಸ್.ಕೆ.ಘಾಟಿ ಮೊ: 9740682979 ಸಂಖ್ಯೆಗೆ ಸಂಪರ್ಕಿಸುವಂತೆ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಜಯಪುರ ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು ಇವರ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಕ್ರೀಡಾಕೂಟದ ಉದ್ಘಾಟನಾ ಸಮಾರಂಭವನ್ನು ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಲಾಯಿತು.

ಈ ಕಾರ್ಯಕ್ರಮದಲ್ಲಿ ಜಾವೇದ್ ಜಮಾದಾರ್ ಮಾತನಾಡಿ, ಜಿಲ್ಲೆಯ 13 ತಾಲ್ಲೂಕುಗಳಲ್ಲಿ ನಡೆದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ಮಾಡಿ ಜಿಲ್ಲಾ ಮಟ್ಟಕ್ಕೆ ಆಯ್ಕೆಯಾಗಿರುವ ಕ್ರೀಡಾಪಟುಗಳು ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಕ್ರೀಡೆಯಲ್ಲಿ ಇನ್ನಷ್ಟು ಉತ್ತಮ ಸಾಧನೆ ಮಾಡುವ ಮೂಲಕ ಜಿಲ್ಲೆ ಹಾಗೂ ರಾಜ್ಯಕ್ಕೆ ಹೆಸರು ತರಬೇಕು ಎಂದು ಹೇಳಿದರು.

ನಾಗರಾಜ ಲಂಬು ಅವರು ಮಾತನಾಡಿ, ಜೀವನದಲ್ಲಿ ಕಲಿಕೆಗೆ ನೀಡುವಷ್ಟೇ ಮಹತ್ವವನ್ನು ಕ್ರೀಡೆಗೂ ನೀಡಿ ಸದಾ ಕ್ರಿಯಾ ಶೀಲರಾಗಿರಲು ವ್ಯಾಯಾಮ, ಯೋಗ ಹಾಗೂ ವಿವಿಧ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಅಗತ್ಯ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಬೋವಿ ಮಾತನಾಡಿ, ಕ್ರೀಡೆಯಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಕ್ರೀಡಾ ಸ್ಫೂರ್ತಿಯಿಂದ ಸ್ಪರ್ಧೆಗಳಲ್ಲಿ ಭಾಗವಹಿಸಿ ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸುವುದು ಮುಖ್ಯ ಎಂದು ಅವರು ಕ್ರೀಡಾಪಟುಗಳಿಗೆ ಕರೆ ನೀಡಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ರಾಜಶೇಖರ ದೈವಾಡಿ, ರವಿಕುಮಾರ, , ಹನುಮಂತ ರಾಮಪುರ, ರವಿಕುಮಾರ ವಾಲಿ, ಪ್ರಿಯಾಂಕಾ, ದೈಹಿಕ ಶಿಕ್ಷಣ ಶಿಕ್ಷಕರು, ವಿದ್ಯಾರ್ಥಿ ವಿದ್ಯಾರ್ಥಿನಿಯರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸೆ.27 ಭಾನುವಾರವೂ ಸಹ ಗ್ರಾಹಕರಿಗೆ ಬ್ಯಾಂಕ್ ಸೇವೆ ಲಭ್ಯ

# ಸೆ.28ರಿಂದ 30ವರೆಗೆ ಬ್ಯಾಂಕ್ ನೌಕರರ ಮುಷ್ಕರ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಬ್ಯಾಂಕ್ ನೌಕರರ ಒಕ್ಕೂಟವು ಸೆ.28ರಿಂದ 30ರವರೆಗೆ ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ಹಾಗೂ ಗ್ರಾಹಕರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಬರುವ ಭಾನುವಾರ ಸೆ.27 ರಂದು ಬ್ಯಾಂಕ್‌ಗಳು ಎಂದಿನಂತೆ ಕಾರ್ಯನಿರ್ವಹಿಸಲಿವೆ ಎಂದು ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರಾದ ಬಿ. ಸಿದ್ಧಯ್ಯ ಅವರು ತಿಳಿಸಿದ್ದಾರೆ.

ಮುಷ್ಕರದ ಅವಧಿಯಲ್ಲಿ ಸಾರ್ವಜನಿಕರ ಬ್ಯಾಂಕಿಂಗ್ ವ್ಯವಹಾರಗಳಿಗೆ ಯಾವುದೇ ರೀತಿಯ ಅಡಚಣೆ ಉಂಟಾಗಬಾರದು ಎಂಬ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಭಾನುವಾರ ಬ್ಯಾಂಕ್ ಶಾಖೆಗಳು ಹಾಗೂ ಎಟಿ–ಎಂಗಳು ಎಂದಿನಂತೆ ಕಾರ್ಯ ನಿರ್ವಹಿಸಲಿವೆ. ಜೊತೆಗೆ ಮುಷ್ಕರದ ದಿನಗಳಲ್ಲಿಯೂ (ಸೆ.28 ರಿಂದ 30) ಎಟಿಎಂಗಳು, ಗ್ರಾಹಕ ಸೇವಾ ಕೇಂದ್ರಗಳು, ಡಿಜಿಟಲ್ ಬ್ಯಾಂಕಿಂಗ್, ಇಂಟರ್ನೆಟ್ ಬ್ಯಾಂಕಿಂಗ್ ಹಾಗೂ ಮೊಬೈಲ್ ಬ್ಯಾಂಕಿಂಗ್ ಸೇವೆಗಳು ಎಂದಿನಂತೆ ಲಭ್ಯವಿರಲಿವೆ ಎಂದು ತಿಳಿಸಿದ್ದಾರೆ.

ಸಾರ್ವಜನಿಕರು ಈ ಬದಲಾವಣೆಯನ್ನು ಗಮನಿಸಿ,ತಮ್ಮ ಬ್ಯಾಂಕಿಂಗ್ ವ್ಯವಹಾರಗಳನ್ನು ಭಾನುವಾರವೂ ಮಾಡಿಕೊಳ್ಳಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ 2026–27ನೇ ಸಾಲಿಗೆ ಉದ್ಯೋಗಿನಿ, ಚೇತನಾ, ಧನಶ್ರೀ, ಲಿಂಗತ್ವ ಅಲ್ಪಸಂಖ್ಯಾತರ ಹಾಗೂ ಮಾಜಿ ದೇವದಾಸಿ ಮಹಿಳೆಯರ ಪುನರ್ವಸತಿ ಯೋಜನೆಗಳಿಗೆ ಅರ್ಜಿ ಆಹ್ವಾನಿಸಿದ್ದಾರೆ.

ಅರ್ಹರು ಸೇವಾ ಸಿಂಧು ಪೋರ್ಟಲ್ ಅಥವಾ ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಅ.31ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಜಯಪುರ ಕಚೇರಿಗೆ ಖುದ್ದಾಗಿ ಭೇಟಿ ನೀಡಿ, ಅಥವಾ ದೂರವಾಣಿ 08352–295353. ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಪ್ರಕಟಣೆ ತಿಳಿಸಿದೆ.

# ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಎರಡನೇ ತ್ರೈಮಾಸಿಕ ತುರ್ತು ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಸೆ.27ರಂದು ಬೆಳಿಗ್ಗೆ 8 ರಿಂದ ಸಂಜೆ 4ರವರೆಗೆ 220/11 ಕೆ.ವಿ ಇಂಡಿ ಹಾಗೂ 110/11 ಕೆ.ವಿ ಸಾಮರ್ಥ್ಯದ ಇಂಡಿ, ಝಳಕಿ, ಚಡಚಣ, ಲಚ್ಯಾಣ, ಹಿರೇಬೆವನೂರ, ರೋಡಗಿ, ಹಿರೇಮಸಳಿ, ನಾದ, ಧೂಳಖೇಡ, ಕೆರೂರ, ಉಮರಾಜ (ರೇವತಗಾಂವ), ಭೈರುಣಗಿ, ಇಂಚಗೇರಿ, ಜಿಗಜೇವಣಗಿ ಹಾಗೂ ಕನ್ನೂರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ವಿದ್ಯುತ್ ಪೂರೈಕೆ ಇರುವುದಿಲ್ಲ.

ಇದೇ ಅವಧಿಯಲ್ಲಿ 33 ಕೆ.ವಿ ಸಾಮರ್ಥ್ಯದ ತಾಂಬಾ, ತಡವಲಗಾ, ನಾದ, ಹೋರ್ತಿ, ನಿವರಗಿ ಹಾಗೂ ಹಲಸಂಗಿ ವಿದ್ಯುತ್ ವಿತರಣಾ ಕೇಂದ್ರಗಳ ವ್ಯಾಪ್ತಿಯಲ್ಲಿಯೂ ವಿದ್ಯುತ್ ವ್ಯತ್ಯಯವಾಗಲಿದೆ. ಸೆ.28ರಂದು ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ 110/11 ಕೆ.ವಿ ಅಥರ್ಗಾ ಮತ್ತು ಝುಂಬಗಿ ವಿದ್ಯುತ್ ವಿತರಣಾ ಕೇಂದ್ರಗಳ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ.

ಸಂಬಂಧಿತ ವಿದ್ಯುತ್ ವಿತರಣಾ ಕೇಂದ್ರಗಳಿಂದ ಹೊರಡುವ ಎಲ್ಲಾ 11 ಕೆ.ವಿ ಮಾರ್ಗಗಳ ವ್ಯಾಪ್ತಿಯ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸುವಂತೆ ಇಂಡಿ ಹೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಕೋರಿದ್ದಾರೆ.

# ಮಾಸಿಕ ಗೌರವಧನ: ಅರ್ಜಿ ಆಹ್ವಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: 2026–27ನೇ ಸಾಲಿಗೆ ಜೈನ್ ಅರ್ಚಕರು, ಬೌದ್ಧ ಧಮ್ಮಾಚಾರಿಗಳು ಹಾಗೂ ಸಿಖ್ ಗ್ರಂಥಿಗಳಿಗೆ ಮಾಸಿಕ ಗೌರವಧನಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ಸಮುದಾಯದ ಜೈನ ಬಸದಿಗಳ ಅರ್ಚಕರು, ಬೌದ್ಧ ವಿಹಾರಗಳ ಧಮ್ಮಾಚಾರಿಗಳು ಹಾಗೂ ಸಿಖ್ ಗುರುದ್ವಾರಗಳ ಗ್ರಂಥಿಗಳು ಮಾಸಿಕ ಗೌರವಧನ ಪಡೆಯಲು ಸೇವಾಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅಗತ್ಯ ದಾಖಲಾತಿಗಳನ್ನು ಸಹಿತ ಜಿಲ್ಲಾ ಅಧಿಕಾ–ರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಜಯಪುರ ಕಚೇರಿಯ ದೂರವಾಣಿ ಸಂಖ್ಯೆ: 08352–295523ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳ ಪ್ರಕಟಣೆ ತಿಳಿಸಿದೆ.

# ರೆಡ್ಡಿ ಸಮಾಜದ ಅಭಿನಂದನಾ ಸಮಾವೇಶ ಯಶಸ್ವಿಗೊಳಿಸಿ

■ ಉದಯರಶ್ಮಿ ದಿನಪತ್ರಿಕೆ

ದೇವರಹಿಪ್ಪರಗಿ: ರೆಡ್ಡಿ ಸಮಾಜದ ರಾಜ್ಯಮಟ್ಟದ ಅಭಿನಂದನಾ ಸಮಾವೇಶವನ್ನು ಯಶಸ್ವಿಗೊಳಿಸಲು ವಿಜಯಪುರ ಜಿಲ್ಲೆಯಿಂದ



ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ವೀರಶೈವ ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷ ಸಂಗನಗೌಡ ಹರನಾಳ ತಿಳಿಸಿದ್ದಾರೆ.

ಪಟ್ಟಣದಲ್ಲಿ ಶುಕ್ರವಾರ ಪತ್ರಿಕೆಯೊಂದಿಗೆ ಮಾತನಾಡಿ, ರಾಜ್ಯ ಹಾಗೂ ಧಾರವಾಡ ಜಿಲ್ಲಾ ಘಟಕದ ಸಹಯೋಗದಲ್ಲಿ ದಿ.27.09.2026 ರಂದು ರವಿವಾರ ಬೆಳಿಗ್ಗೆ 10.30 ಗಂಟೆಗೆ ಶ್ರೀವೀರೇಂದ್ರ ಹೆಗಡೆ ಕಲಾಕ್ಷೇತ್ರ ಸುತ್ತೂರ ಹುಬ್ಬಳ್ಳಿ–ಧಾರವಾಡದಲ್ಲಿ ರಾಜ್ಯಮಟ್ಟದ ಅಭಿನಂದನ ಸಮಾರಂಭ ನಡೆಯಲಿದೆ. ಸಮಾಜದ ಸಂಘಟನೆ, ಒಗ್ಗಟ್ಟು ಹಾಗೂ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಪ್ರಗತಿಗೆ ಇಂತಹ ಸಮಾವೇಶಗಳು ಮಹತ್ವದ ವೇದಿಕೆಯಾಗಿವೆ. ರಾಜ್ಯಮಟ್ಟದ ಪದಾಧಿಕಾರಿಗಳು, ಶ್ರೀಗಳು, ಮಂತ್ರಿಗಳು ಹಾಗೂ ಮುಖಂಡರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಜಿಲ್ಲೆಯ ವಿವಿಧ ತಾಲ್ಲೂಕುಗಳಿಂದ ಸಮಾಜದ ಮುಖಂಡರು, ಪದಾಧಿಕಾರಿಗಳು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾವೇಶದ ಯಶಸ್ಸಿಗೆ ಸಹಕರಿಸಬೇಕು. ಸಮಾಜದ ಎಲ್ಲ ಬಂಧುಗಳು ಒಗ್ಗಟ್ಟಿನಿಂದ ಭಾಗವಹಿಸುವ ಮೂಲಕ ತಮ್ಮ ಶಕ್ತಿ ಮತ್ತು ಸಂಘಟನಾ ಸಾಮರ್ಥ್ಯವನ್ನು ಪ್ರದರ್ಶಿಸಬೇಕು ಎಂದು ಮನವಿ ಮಾಡಿದ್ದಾರೆ.

# ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ: ಸೆ.28 ರಿಂದ ದೈಹಿಕ ಪರೀಕ್ಷೆಗಳು ಆರಂಭ

**ವಲಯವಾರು ವೇಳಾಪಟ್ಟಿ ಪ್ರಕಟ । ಒಟ್ಟು 3,991 ಹುದ್ದೆಗಳಿಗೆ ಅರ್ಹತೆ ಪಡೆದ 19,396 ಅಭ್ಯರ್ಥಿಗಳಿಗೆ ಕಾಯ್ದಿರಿಸಿದ ಪರೀಕ್ಷಾ ಕೇಂದ್ರಗಳ ಸಂಪೂರ್ಣ ವಿವರ**

■ ಉದಯರಶ್ಮಿ ದಿನಪತ್ರಿಕೆ



ಬೆಂಗಳೂರು: ರಾಜ್ಯ ಪೊಲೀಸ್ ನೇಮಕಾತಿ ವಿಭಾಗವು ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ (ಆರ್‌ಪಿಸಿ ಮತ್ತು ಕೆಕೆ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅತ್ಯಂತ ಪ್ರಮುಖವಾದ ದೇಹದಾರ್ಢ್ಯ ಪರೀಕ್ಷೆ (PST) ಹಾಗೂ ಸಹಿಷ್ಣುತಾ ಪರೀಕ್ಷೆಯ (ET) ವೇಳಾಪಟ್ಟಿಯನ್ನು ಅಧಿಕೃತವಾಗಿ ಬಿಡುಗಡೆ ಮಾಡಿದೆ.

ಈ ಬೃಹತ್ ನೇಮಕಾತಿ ಅಭಿಯಾನದಡಿ ಒಟ್ಟು 3,991 ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದ್ದು, ರಾಜ್ಯಾದ್ಯಂತ ವಿವಿಧ ಹಂತಗಳಲ್ಲಿ ಆಯ್ಕೆಯಾಗಿರುವ ಒಟ್ಟು 19,396 ಅರ್ಹ ಅಭ್ಯರ್ಥಿಗಳು ಈ ದೈಹಿಕ ಪರೀಕ್ಷೆಗಳಲ್ಲಿ ಭಾಗವಹಿಸಲಿದ್ದಾರೆ.

ಉಳಿಕೆ ಮೂಲ ವೃಂದದ (RPC) ಒಟ್ಟು 3,395 ಹುದ್ದೆಗಳಿಗೆ 16,454 ಅಭ್ಯರ್ಥಿಗಳು ಪರೀಕ್ಷೆಗೆ ಅರ್ಹತೆ ಪಡೆದಿದ್ದರೆ, ಕಲ್ಯಾಣ ಕರ್ನಾಟಕ (KK) ವೃಂದದ 596 ಹುದ್ದೆಗಳಿಗೆ 2,942 ಅಭ್ಯರ್ಥಿಗಳು ದೈಹಿಕ ಪರೀಕ್ಷೆಗೆ ಆಯ್ಕೆಯಾಗಿದ್ದಾರೆ.

ಉಳಿಕೆ ಮೂಲ ವೃಂದದ (RPC) ಪರೀಕ್ಷಾ ವಿವರಗಳು: ಬೆಂಗಳೂರು ನಗರ ಘಟಕ: ಈ ಘಟಕ ವ್ಯಾಪ್ತಿಯಲ್ಲಿ 2,015 ಹುದ್ದೆಗಳಿದ್ದು, ಒಟ್ಟು 9,887 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ. ಇವರಿಗೆ 2026 ನೇ ಸೆಪ್ಟೆಂಬರ್ 28, ರಿಂದ ಅಕ್ಟೋಬರ್ 05 ರವರೆಗೆ ಪರೀಕ್ಷೆ ನಡೆಯಲಿದೆ.

ಪರೀಕ್ಷೆಗಳು ಸಿಎಆರ್ (ಹೆಚ್‌ಕ್ಯೂ) ಚಾಮರಾಜಪೇಟೆಯ ಸಿರ್ಸಿ ಸರ್ಕಲ್ ಮೈದಾನ, ಆಡುಗೋಡಿಯ ಸಿಎಆರ್ (ದಕ್ಷಿಣ) ಮೈದಾನ ಹಾಗೂ ಆರ್.ಕೆ. ಹೆಗಡೆ ನಗರದ ತನಿಷಂದ್ರ ಮುಖ್ಯ ರಸ್ತೆಯಲ್ಲಿರುವ ಸಿಎಆರ್ (ಉತ್ತರ) ಪರೇಡ್ ಮೈದಾನಗಳಲ್ಲಿ ಜರುಗಲಿವೆ.

**ಕೇಂದ್ರ ವಲಯ:** ಚಿಕ್ಕಬಳ್ಳಾಪುರ, ಕೋಲಾರ, ತುಮಕೂರು, ಬೆಂಗಳೂರು ಜಿಲ್ಲೆ ಹಾಗೂ ರೈಲ್ವೆ ಘಟಕಗಳನ್ನು ಒಳಗೊಂಡಂತೆ 200 ಹುದ್ದೆಗಳಿಗೆ 946 ಅಭ್ಯರ್ಥಿಗಳು ಸ್ಪರ್ಧಿಸಲಿದ್ದಾರೆ.

ಇವರ ಪರೀಕ್ಷೆಗಳು 2026 ನೇ ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 03 ರವರೆಗೆ ಬೆಂಗಳೂರಿನ ಕೊರಮಂಗಲದ ಮಡಿವಾಳ ಮಾರುಕಟ್ಟೆ ಎದುರು 3ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ನಡೆಯಲಿವೆ.

ದಕ್ಷಿಣ ವಲಯ: ಮೈಸೂರು ನಗರ, ಮೈಸೂರು ಜಿಲ್ಲೆ, ಹಾಸನ, ಕೊಡಗು, ಚಾಮರಾಜನಗರ ಮತ್ತು ಮಂಡ್ಯ ಘಟಕಗಳ 395 ಹುದ್ದೆಗಳಿಗೆ 1,891 ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ.

ಇವರಿಗೆ 2026 ನೇ ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 05 ರವರೆಗೆ ಮೈಸೂರಿನ ರೇಸ್ ಕೋರ್ಸ್ ಹಿಂಭಾಗದಲ್ಲಿರುವ ಸಿಟಿ ಆರ್ಮ್ಸ್ ರಿಸರ್ವ್ (CAR) ಪರೇಡ್ ಮೈದಾನದಲ್ಲಿ ದೈಹಿಕ ಪರೀಕ್ಷೆ ಜರುಗಲಿದೆ.

ಪೂರ್ವ ವಲಯ: ಶಿವಮೊಗ್ಗ, ಹಾವೇರಿ, ದಾವಣಗೆರೆ ಹಾಗೂ ಚಿತ್ರದುರ್ಗ ಘಟಕಗಳ ವ್ಯಾಪ್ತಿಯ 250 ಹುದ್ದೆಗಳಿಗೆ 1,234 ಅಭ್ಯರ್ಥಿಗಳು ಪರೀಕ್ಷೆಗೆ ಅರ್ಹರಾಗಿದ್ದಾರೆ.

ಇವರ ಪರೀಕ್ಷೆಯು 2026ನೇ ಸೆಪ್ಟೆಂಬರ್ 29 ರಿಂದ ಅಕ್ಟೋಬರ್ 06 ರವರೆಗೆ ಶಿವಮೊಗ್ಗದ ನವಿಲೆಯಲ್ಲಿರುವ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಮೈದಾನದಲ್ಲಿ ನಡೆಯಲಿದೆ.

**ಪಶ್ಚಿಮ ವಲಯ:** ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ (ಕಾರವಾರ), ಚಿಕ್ಕಮಗಳೂರು ಮತ್ತು ಮಂಗಳೂರು ನಗರ ಘಟಕಗಳ 395 ಹುದ್ದೆಗಳಿಗೆ 1,803 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದಾರೆ.

ಇವರಿಗೆ 2026 ನೇ ಸೆಪ್ಟೆಂಬರ್ 28 ರಿಂದ ಅಕ್ಟೋಬರ್ 03 ರವರೆಗೆ ಮಂಗಳೂರಿನ ಲಾಲ್‌ಬಾಗ್‌ನಲ್ಲಿರುವ ಮಂಗಳ ಕ್ರೀಡಾಂಗಣದಲ್ಲಿ ದೈಹಿಕ ಪರೀಕ್ಷೆ ನಿಗದಿಯಾಗಿದೆ.

**ಉತ್ತರ ವಲಯ:** ಗದಗ್ ಹಾಗೂ ಹುಬ್ಬಳ್ಳಿ–ಧಾರವಾಡ ನಗರ ಘಟಕ ಒಳಗೊಂಡ 110 ಹುದ್ದೆಗಳಿಗೆ 549 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ.

**ಇವರಿಗೆ 2026 ನೇ ಸೆಪ್ಟೆಂಬರ್ 29 ಮತ್ತು 30** 2026 ರಂದು ಬೆಳಗಾವಿಯ ವಿಟಿಯು ಹತ್ತಿರದ ಮಚ್ಚೆಯಲ್ಲಿರುವ 2ನೇ ಬೆಟಾಲಿಯನ್ ಕೆಎಸ್‌ಆರ್‌ಪಿ ಮೈದಾನದಲ್ಲಿ ಪರೀಕ್ಷೆ ನಡೆಯಲಿದೆ.

**ಬಳ್ಳಾರಿ ವಲಯ (RPC):** ಬಳ್ಳಾರಿ ಮತ್ತು ರಾಯಚೂರು ಘಟಕಗಳ 30 ಹುದ್ದೆಗಳಿಗೆ 144 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಇವರಿಗೆ ಪರೀಕ್ಷೆಯು 2026 ನೇ ಅಕ್ಟೋಬರ್ 05 ರಿಂದ ಅಕ್ಟೋಬರ್ 06 ರವರೆಗೆ ಕೊಪ್ಪಳದ ಮುನಿರಾಬಾದ್‌ನ ಹೊಸಹಳ್ಳಿ ಬಳಿಯಿರುವ ಕೆ–ಎಸ್‌ಆರ್‌ಪಿ ಪಿ.ಟಿ.ಎಸ್. ಮೈದಾನದಲ್ಲಿ (ಐಆರ್‌ಬಿ ಕ್ಯಾಂಪಸ್) ನಡೆಯಲಿದೆ.

**ಕಲ್ಯಾಣ ಕರ್ನಾಟಕ (KK)** ವೃಂದದ ಪರೀಕ್ಷಾ ವಿವರಗಳು: ಸಿಒಪಿ ಬೆಂಗಳೂರು ನಗರ (ಏಏ): ಈ ಭಾಗದ 171 ಹುದ್ದೆಗಳಿಗೆ 833 ಅಭ್ಯರ್ಥಿಗಳು ಅರ್ಹರಾಗಲಿದ್ದು, 2026 ನೇ ಅಕ್ಟೋಬರ್ 08 ರಂದು ಬೆಂಗಳೂರಿನ ಚಾಮರಾಜಪೇಟೆಯ ಸಿಎಆರ್ ಪರೇಡ್ ಮೈದಾನ (ಹೆಚ್‌ಕ್ಯೂ) ಹಾಗೂ ಆಡುಗೋಡಿಯ ಸಿಎಆರ್ ಪರೇಡ್ ಮೈದಾನಗಳಲ್ಲಿ (ದಕ್ಷಿಣ) ಏಕಕಾಲದಲ್ಲಿ ದೈಹಿಕ ಪರೀಕ್ಷೆ ನಡೆಯಲಿದೆ.

**ಬಳ್ಳಾರಿ ವಲಯ (KK ಘಟಕಗಳು):** ಕೊಪ್ಪಳ, ರಾಯಚೂರು, ಬಳ್ಳಾರಿ ಹಾಗೂ ವಿಜಯನಗರ ಘಟಕಗಳ 174 ಹುದ್ದೆಗಳಿಗೆ 869 ಅಭ್ಯರ್ಥಿಗಳು ಅರ್ಹತೆ ಪಡೆದಿದ್ದಾರೆ.

ಇವರಿಗೆ 2026ನೇ ಅಕ್ಟೋಬರ್ 12 ರಿಂದ 15 ರವರೆಗೆ ಕೊಪ್ಪಳದ ಮುನಿರಾಬಾದ್ ಹೊಸಹಳ್ಳಿಯಲ್ಲಿರುವ ಕೆಎಸ್‌ಆರ್‌ಪಿ ಪಿ.ಟಿ.ಎಸ್. ಮೈದಾನದಲ್ಲಿ ದೈಹಿಕ ಪರೀಕ್ಷೆ ನಡೆಸಲಾಗುವುದು.

ಈಶಾನ್ಯ ವಲಯ: ಕಲಬುರಗಿ ನಗರ, ಕಲಬುರಗಿ ಜಿಲ್ಲೆ ಹಾಗೂ ಬೀದರ್ ಘಟಕಗಳ 251 ಹುದ್ದೆಗಳಿಗೆ 1,240 ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ.

ಇವರ ಪರೀಕ್ಷೆಯು 2026ನೇ ಅಕ್ಟೋಬರ್ 12 ರಿಂದ 14 ರವರೆಗೆ ಕಲಬುರಗಿಯ ತಾಜ್ ಸುಲ್ತಾನ್‌ಪುರದಲ್ಲಿರುವ 6ನೇ ಬೆಟಾಲಿಯನ್ ಕೆ–ಎಸ್‌ಆರ್‌ಪಿ ಮೈದಾನದಲ್ಲಿ ನಡೆಯಲಿದೆ.

**ಅಭ್ಯರ್ಥಿಗಳಿಗೆ ಪ್ರಮುಖ ಸೂಚನೆ:** ಪರೀಕ್ಷೆಗೆ ಅರ್ಹತೆ ಪಡೆದಿರುವ ಅಭ್ಯರ್ಥಿಗಳು ತಮ್ಮ ಕರೆ ಪತ್ರವನ್ನು (Call Letter) ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (KEA) ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಅರ್ಹ ಅಭ್ಯರ್ಥಿಗಳು ತಮಗೆ ನಿಗದಿಪಡಿಸಿದ ದಿನಾಂಕಗಳಂದು ನಿಗದಿತ ದೈಹಿಕ ಪರೀಕ್ಷಾ ಕೇಂದ್ರಗಳಿಗೆ ಕಡ್ಡಾಯವಾಗಿ ವರದಿ ಮಾಡಬೇಕೆಂದು ಪೊಲೀಸ್ ನೇಮಕಾತಿ ವಿಭಾಗವು ಸ್ಪಷ್ಟಪಡಿಸಿದೆ.

# ಮಸಣಕ್ಕೆ ದಾರಿ ತೋರಿಸುವ ವ್ಯಸನ: ಬಿರಾದಾರ

## ಸಿಂದಗಿಯಲ್ಲಿ ‘ನಶೆ ಮುಕ್ತ ಭಾರತ ಅಭಿಯಾನ’ದ ಜಾಗೃತಿ ಜಾಥಾಕ್ಕೆ ಚಾಲನೆ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ವ್ಯಸನವು ಮಸಣಕ್ಕೆ ದಾರಿ ತೋ–ರಿಸುತ್ತದೆ. ಇಂದಿನ ಹೊಸ ಪೀಳಿಗೆಯನ್ನು ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಗೊಳಿಸುವ ಅಗತ್ಯವಿದೆ. ಈ ನಿಟ್ಟಿನಲ್ಲಿ ನಾವೆಲ್ಲರೂ ಒಗ್ಗೂಡಿ ಕಾರ್ಯನಿರ್ವಹಿಸಬೇಕು” ಎಂದು ಆರ್.ಡಿ. ಪಾಟೀಲ ಕಾಲೇಜಿನ ನಿವೃತ್ತ ಪ್ರಾಚಾರ್ಯ ಹಾಗೂ ಸಿಂದಗಿ ಲಯನ್ಸ್ ಕ್ಲಬ್ ಕಾರ್ಯದರ್ಶಿ ಐ.ಬಿ. ಬಿರಾದಾರ ಹೇಳಿದರು.

ಲಯನ್ಸ್ ಕ್ಲಬ್ ಸಿಂದಗಿ, ಸಿ.ಎಂ. ಮನಗೂಳಿ ಪದವಿ ಮಹಾವಿದ್ಯಾಲಯದ ರೆಡ್ ಕ್ರಾಸ್ ಘಟಕ ಹಾಗೂ ಜೆ.ಎಚ್. ಪಟೇಲ್ ಶಿಕ್ಷಣ ಮಹಾವಿದ್ಯಾಲಯದ ಸಂಯುಕ್ತ ಆಶ್ರಯದಲ್ಲಿ ನಡೆದ ‘ನಶೆ ಮುಕ್ತ ಭಾರತ ಅಭಿಯಾನ’ದ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನ ಯುವಜನತೆ ಮಾದಕ ವಸ್ತುಗಳ ವ್ಯಸನಕ್ಕೆ ಒಳಗಾಗದಂತೆ ಜಾಗೃತಿ ಮೂಡಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ವ್ಯಸನದಿಂದ ವ್ಯಕ್ತಿಯ ಆರೋಗ್ಯ, ಕುಟುಂಬ ಮತ್ತು ಸಮಾಜದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಆದ್ದರಿಂದ ಯುವಜನರಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸುವ ಕಾರ್ಯ ನಿರಂತರವಾಗಿ ನಡೆಯಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಲಯನ್ಸ್ ಕ್ಲಬ್ ಅಧ್ಯಕ್ಷ ಡಾ. ಅಂಬರೀಶ್ ಬಿರಾದಾರ, ಎಂ.ಜೆ.ಎಫ್. ಲಯನ್ ಕೆ.ಎಚ್. ಸೋಮಪುರ, ಜೆ.ಎಚ್. ಪಟೇಲ್ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ಎಂ. ಹುರುಕಡ್ಲಿ, ಸಿ.ಎಂ. ಮನಗೂಳಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಬಿ.ಡಿ. ಮಾಸ್ತಿ, ಡಾ. ಎಸ್.ಕೆ. ಹೂಗಾರ, ಪ್ರೊ. ಎಂ.ಎಲ್. ಪರಮಾನಂದ,ಗುರುಲಿಂಗಪ್ಪಬಿರಾದಾರ,ಆರ್.ಎಂ. ಯಂಕಂಚಿಕರ, ಎಸ್.ವೈ. ನಾಯ್ಕೋಡಿ, ಲಯನ್ ಶಾಂತು ದುರ್ಗಿ, ಲಯನ್ ಶರಣು ಬೂದಿಹಾಳ, ಉಪನ್ಯಾಸಕ ಅಜ್ಜಪ್ಪ ಸೇರಿದಂತೆ ಸಿ.ಎಂ. ಮನಗೂಳಿ ಮಹಾವಿದ್ಯಾಲಯದ ಎನ್‌ಸಿಸಿ ವಿದ್ಯಾರ್ಥಿಗಳು ಹಾಗೂ ಜೆ.ಎಚ್. ಪಟೇಲ್ ಮಹಾವಿದ್ಯಾಲಯದ ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು.

ಜಾಗೃತಿ ಜಾಥಾದಲ್ಲಿ ವಿದ್ಯಾರ್ಥಿಗಳು “ವ್ಯಸನ ಪ್ರಾಣಕ್ಕೆ ಕುತ್ತು”, “ವ್ಯಸನ ಬಿಡಿ, ಸಂತಸ ಪಡಿ” ಸೇರಿದಂತೆ ವಿವಿಧ ಘೋಷಣೆಗಳನ್ನು ಕೂಗುತ್ತಾ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸಿದರು.

# ಬಸ್ಸ್ಟ್ಯಾಂಡ್ ಕಾ ರಾಜಾ ಗಣಪತಿಗೆ ಭಕ್ತಿ–ಭಾವದ ವಿದಾಯ

## 101 ಮುತ್ತೈದೆಯರಿಗೆ ಸೀರೆ ಕೊಡುಗೆ । ಡಾ. ತೌಫೀಕ್ ಪಾರ್ಥನಳ್ಳಿ ನೇತೃತ್ವದಲ್ಲಿ ಸೇವಾ ಕಾರ್ಯ

■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ತಾಲೂಕಿನ ಚಿಕ್ಕಪಡಸಲಗಿ ಗ್ರಾಮದ ಬಸ್ ನಿಲ್ದಾಣದಲ್ಲಿ ಪ್ರತಿಷ್ಠಾಪಿಸಲಾಗಿದ್ದ ‘ಬಸ್‌ಸ್ಟ್ಯಾಂಡ್ ಕಾ ರಾಜಾ’ ಗಣಪತಿಗೆ ಗುರುವಾರ ಭಕ್ತಿ, ಸಂಭ್ರಮ ಹಾಗೂ ಸೌಹಾರ್ದತೆಯ ನಡುವೆ ಅದ್ದೂರಿ ವಿದಾಯ ನೀಡಲಾಯಿತು.

> **101 ಮಹಿಳೆಯರಿಗೆ ಸೀರೆ ಕೊಡುಗೆ**
>
> **ಗಣೇಶೋತ್ಸವಕ್ಕೆ ಸಾಮಾಜಿಕ ಸೇವೆಯ ಸ್ಪರ್ಶ ನೀಡಿದ ಜಮಖಂಡಿಯ ಕಾಂಗ್ರೆಸ್ ಮುಖಂಡ ಡಾ. ತೌಫೀಕ್ ಪಾರ್ಥನಳ್ಳಿ ಅವರ ನೇತೃತ್ವದಲ್ಲಿ 101 ಮುತ್ತೈದೆಯರಿಗೆ ಸೀರೆಗಳನ್ನು ಕೊಡುಗೆಯಾಗಿ ನೀಡಲಾಯಿತು. ಹಬ್ಬದ ಸಂಭ್ರಮದ ನಡುವೆ ಮಹಿಳೆಯರನ್ನು ಗೌರವಿಸುವ ಉದ್ದೇಶದಿಂದ ನಡೆದ ಈ ಸೇವಾ ಕಾರ್ಯವು ವಿಶೇಷ ಗಮನ ಸೆಳೆಯಿತು.**
>
> **ಸೀರೆ ವಿತರಣೆ ವೇಳೆ ಮಹಿಳೆಯರಲ್ಲಿ ಸಂತಸ ಮನೆಮಾಡಿತ್ತು. ಧಾರ್ಮಿಕ ಆಚರಣೆಗಳ ಜೊತೆಗೆ ಸಮಾಜದಲ್ಲಿ ಪ್ರೀತಿ, ಗೌರವ, ಸಹೋದರತ್ವ ಹಾಗೂ ಸೇವಾ ಮನೋಭಾವವನ್ನು ಬೆಳೆಸುವ ಸಂದೇಶವನ್ನು ಕಾರ್ಯಕ್ರಮ ಸಾರಿತು.**



> **ಸಂಭ್ರಮದೊಂದಿಗೆ ಸೌಹಾರ್ದದ ಸಂದೇಶ**
>
> **ಗಣಪತಿ ವಿಸರ್ಜನೆಯ ಭಕ್ತಿ–ಸಂಭ್ರಮದೊಂದಿಗೆ ಮಹಿಳೆಯರಿಗೆ ಗೌರವ ಸಲ್ಲಿಸುವ ಸೇವಾ ಕಾರ್ಯವೂ ಸೇರಿಕೊಂಡಿದ್ದು, ಉತ್ಸವಕ್ಕೆ ಮತ್ತಷ್ಟು ಮೆರುಗು ತಂದಿತು. ಗ್ರಾಮದ ವಿವಿಧ ಸಮುದಾಯಗಳ ಜನರು ಒಟ್ಟಾಗಿ ಪಾಲ್ಗೊಂಡು ಸೌಹಾರ್ದತೆಯ ವಾತಾವರಣ ನಿರ್ಮಿಸಿದರು.**

ಗಣೇಶೋತ್ಸವದ ಅಂಗವಾಗಿ ಬೆಳಗ್ಗೆಯಿಂದಲೇ ವಿವಿಧ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳು ಜರುಗಿದವು. ನೂರಾರು ಮುತ್ತೈದೆಯರಿಗೆ ಉಡಿ ತುಂಬಿ ಗೌರವ ಸಲ್ಲಿಸಲಾಯಿತು. ಬಳಿಕ ಭಕ್ತರಿಗೆ ಅನ್ನಸಂತರ್ಪಣೆ ಆಯೋಜಿಸುವ ಮೂಲಕ ಹಬ್ಬದ ಸಂಭ್ರಮವನ್ನು ಸಾಮೂಹಿಕವಾಗಿ ಹಂಚಿಕೊಳ್ಳಲಾಯಿತು.


ಸಂಜೆ ನಡೆದ ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆ ಗಮನ ಸೆಳೆಯಿತು. ಡೊಳ್ಳು, ಕರಡಿ ಮಜಲು ಸೇರಿದಂತೆ ಸಾಂಪ್ರದಾಯಿಕ ವಾದ್ಯಗಳ ನಿನಾದಕ್ಕೆ ಗ್ರಾಮದ ಬೀದಿಗಳು ಮೊಳಗಿದವು. ಡೊಳ್ಳು–ಕರಡಿ ಮಜಲಿನ ಸದ್ದು, ಯುವಕರ ಉತ್ಸಾಹ ಹಾಗೂ ಮಹಿಳೆಯರ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ಚಿಕ್ಕಪಡಸಲಗಿ ಗ್ರಾಮದಲ್ಲಿ ಹಬ್ಬದ ವಾತಾವರಣ ಕಳೆಗಟ್ಟಿತ್ತು. ಯುವಕರು, ಮಹಿಳೆಯರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಮೆರವಣಿಗೆಯಲ್ಲಿ ಪಾಲ್ಗೊಂಡು ಭಕ್ತಿಭಾವದಿಂದ ಗಣಪತಿಗೆ ವಿದಾಯ ಹೇಳಿದರು.

ಯುವಕ ಮಂಡಳಿ ಸದಸ್ಯರು, ಮಹಿಳೆಯರು, ಸಾರ್ವಜನಿಕರು ಹಾಗೂ ಗ್ರಾಮದ ಗಣ್ಯರು ಸೇ–ರಿದಂತೆ ಹಲವು ಮಂದಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಗಣೇಶೋತ್ಸವದ ಸಂಭ್ರಮಕ್ಕೆ 101 ಮುತ್ತೈದೆಯರಿಗೆ ಸೀರೆ ಕೊಡುಗೆಯ ಮೂಲಕ ಸಾಮಾಜಿಕ ಕಾಳಜಿಯ ಸ್ಪರ್ಶ ನೀಡಿದ್ದು, ಧಾರ್ಮಿಕ ಆಚರಣೆಗಳು ಸಮಾಜಮುಖಿ ಚಿಂತನೆಯೊಂದಿಗೆ ಬೆಸೆದುಕೊಂಡಾಗ ಉತ್ಸವದ ಅರ್ಥ ಮತ್ತಷ್ಟು ವಿಸ್ತ–ರಿಸುತ್ತದೆ ಎಂಬ ಸಂದೇಶವನ್ನು ಸಾರಿತು.

# ದೇವರಹಿಪ್ಪರಗಿಯಲ್ಲಿ ಕಾನೂನು ಅರಿವು ಮತ್ತು ನೆರವು

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಡಿಜಿಟಲ್ ವಂಚನೆ ಕುರಿತು ಹಿರಿಯ ನಾಗರಿಕರು ಎಚ್ಚರಿಕೆ ವಹಿಸುವುದು ಅಗತ್ಯ ಎಂದು ಸಂಪನ್ಮೂಲ ವ್ಯಕ್ತಿ ಆರ್.ಕೆ.ಪೂಜಾರಿ ಹೇಳಿದರು.

ಪಟ್ಟಣದ ಪ್ರವಾಸಿಮಂದಿರದಲ್ಲಿ ಶುಕ್ರವಾರ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಜರುಗಿದ "ಕಾನೂನು ಅರಿವು ಮತ್ತು ನೆರವು’ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಹಿರಿಯ ನಾಗರಿಕರ ಕಾಯ್ದೆ –2007, ಹಿರಿಯ ನಾಗರಿಕರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು, ಸೈಬರ್ ಮತ್ತು ಡಿಜಿಟಲ್ ವಂಚನೆ ಕು–ರಿತು ಮಾಹಿತಿ ನೀಡಿದರು.

ನವರಸ ಜಾನಪದ ಕಲಾಯುವಕ ಸಂಘ ವಿಜಯಪುರ ಇದರ ಅಧ್ಯಕ್ಷ ಹಾಗೂ ವಕೀಲ ಬಾಬು.ಎಮ್. ಅವತಾಡೆ ಮಾತನಾಡಿ, ಹಿರಿಯ ನಾಗರಿಕರ ರಕ್ಷಣೆಗಾಗಿ 2007ರ ಕಾಯಿದೆಯನ್ನು ಜಾರಿಗೆ ತಂದಿದ್ದು, ಸದರಿ ಕಾಯ್ದೆ ಮತ್ತು ನಿಯಮಗಳ ಕುರಿತು ವಿವರಿಸಿ ಹಿರಿಯ ನಾಗರಿಕ–ರಿಗೆ ಕಾನೂನು ಸೇವಾ ಪ್ರಾಧಿಕಾರದಿಂದ ಉಚಿತವಾಗಿ ಸೇವೆ ಒದಗಿಸಲಾಗುತ್ತದೆ ಎಂದು ತಿಳಿಸಿದರು.

ನಿವೃತ್ತ ನೌಕರರ ಸಂಘದ ಅಧ್ಯಕ್ಷರ ಚನ್ನವೀರ ಕುದರಿ ಮಾತನಾಡಿದರು.

ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಅಫ್ರೋಜ್ ಅಹ್ಮದ ಪಟೇಲ, ಸಿಂದಗಿ ತಾಲ್ಲೂಕು ಪಂಚಾಯಿತಿ ಎಂ.ಆರ್.ಡಬ್ಲ್ಯೂ ಮುತ್ತುರಾಜ ಸಾತಿಹಾಳ, ಪಟ್ಟಣ ಪಂಚಾಯಿತಿ ಯು.ಆರ್.ಡಬ್ಲ್ಯೂ ಪರಶುರಾಮ ಯಲಗೋಡ, ವಿ.ಆರ್.ಡಬ್ಲೂಗಳಾದ ಸಂಗಪ್ಪ ಸುರಗಿಹಳ್ಳಿ, ಶರಣಗೌಡ ಪಾಟೀಲ, ಸರೂಬಾಯಿ, ಬಸಮ್ಮ , ಚೈತ್ರ, ಬಸಪ್ಪ, ಶಾಬುದ್ದಿನ ಬುಕ್ಕದ ಹಾಗೂ ನಿವೃತ್ತ ನೌಕರರ ಸಂಘದ ಸದಸ್ಯರು ಇದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR